ಹುಬ್ಬಳ್ಳಿ–ಧಾರವಾಡ, ಗದಗ, ಬಾಗಲಕೋಟೆ, ವಿಜಯಪುರ, ಕೊಪ್ಪಳ, ವಿಜಯನಗರ, ಬೆಳಗಾವಿ, ದಾವಣಗೆರೆ, ರಾಯಚೂರ, ಯಾದಗಿರಿ

ಪಬ್ಲಿಕ್ ಫಾಸ್ಟ್

PUBLIC FAST

ಕನ್ನಡ ದಿನಪತ್ರಿಕೆ

E-mail : publicfast31@gmail.com

ಧ್ವನಿ ನಿಮ್ಮದು ಸಹಾಯ ನಮ್ಮದು... DAILY NEWS PAPER

ಸಂಪಾದಕರು : ಐಶ್ವರ್ಯ ಪಿ. ಉಪ ಸಂಪಾದಕರು : ಇಮ್ರಾನ್ ಹೆಬ್ಬಳ್ಳಿ

● ಸಂಪುಟ : 01 ● ಸಂಚಿಕೆ : 142 ● ದಿನಾಂಕ : 14–10–2026 ಬುಧವಾರ KNKAN/26/A2600 ಪುಟ : 4 ಬೆಲೆ : ರೂ. 2 Mobile : 9916890865


ಮೀಸಲಾತಿ ರದ್ದು: ಸುಪ್ರೀಂಗೆ ಮೇಲ್ಮನವಿ ಚರ್ಚಿಸಿ ತೀರ್ಮಾನ



ಬೆಂಗಳೂರು:ಎಸ್ಸಿ/ಎಸ್ಟಿಮೀಸಲಾತಿ ಹೆಚ್ಚಳಕ್ಕೆ ಹೈಕೋರ್ಟ್ ತಡೆ–ಯಾಜ್ಞೆ ನೀಡಿರುವ ವಿಚಾರದಲ್ಲಿ ಸುಪ್ರೀಂ ಕೋರ್ಟ್ಗೆ ಅಪೀಲ್ ಹೋಗಬೇಕೋ ಬೇಡವೋ ಎಂಬುದನ್ನು ಕ್ಯಾಬಿನೆಟ್ನಲ್ಲಿ ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ಉಪಮುಖ್ಯಮಂತ್ರಿಡಾ.ಜಿ.ಪರಮೇಶ್ವರ್‌ಹೇಳಿದ್ದಾರೆ.
ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ಜನಸಂಖ್ಯೆಗೆ ಅನುಗುಣವಾಗಿ ಎಸ್ಸಿ/ಎಸ್ಟಿ ಸಮುದಾಯಗಳಿಗೆ ಮೀಸಲಾತಿ ನೀಡಲು ಸರ್ಕಾರ ತೀರ್ಮಾನಿಸಿತ್ತು. ಆದರೆ ಅದನ್ನು ಪರಿಗಣಿಸದೆ ನ್ಯಾಯಾಲಯ ತಡೆಯಾಜ್ಞೆ ನೀಡಿದೆ. ಸಾವಿರಾರು ವರ್ಷಗಳಿಂದ ಅವಕಾಶ ವಂಚಿತರಾದವರಿಗೆ ಅನುಕೂಲವಾಗಲು ಡಾ. ಅಂಬೇಡ್ಕರ್ ಮೀಸಲಾತಿ ತಂದಿದ್ದರು. ಈ ಎಲ್ಲ ಅಂಶಗಳನ್ನು ಗಮನಿಸಿ ನ್ಯಾಯಾಲಯ ಆದೇಶ ನೀಡಬೇಕಿತ್ತು. ವಿಶೇಷ ಸಂದರ್ಭದಲ್ಲಿ ಇದನ್ನು ಪರಿಗಣಿಸಬಹುದಿತ್ತು” ಎಂದರು “ಹಿಂದೆ ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಆಗಿದ್ದಾಗ ಶೇ.56 ಮೀಸಲಾತಿ ಜಾರಿ ಮಾಡಲಾಗಿತ್ತು. ಅದರಲ್ಲಿ ಎಸ್ಸಿ ಶೇ.17, ಎಸ್ಟಿ ಶೇ.7 ಇತ್ತು. ನಮ್ಮ ಸರ್ಕಾರ ಬಂದಾಗ ಅದನ್ನು ಅನುಸರಿಸಲಾಯಿತು. ಈಗ ನಾವು ಶೇ.6ರಷ್ಟು ಮಾತ್ರ ಹೆಚ್ಚಳಮಾಡಿದ್ದೆವು.ವಿಶೇಷಸಂದರ್ಭದಲ್ಲಿಮೀಸಲಾತಿ ಹೆಚ್ಚಿಸುವ ಅವಕಾಶವಿದೆ. ಒಳಮೀಸಲಾತಿಯನ್ನೂ ಇದೇ ಆಧಾರದಲ್ಲಿ ನೀಡಲಾಗಿತ್ತು. ಅದನ್ನು ನೋಡಬೇಕಾಗುತ್ತದೆ” ಎಂದು ವಿವರಿಸಿದರು.
“ವಿಪಕ್ಷಗಳ ಟೀಕೆಗೆ ಉತ್ತರವಾಗಿ, ನಾವು ನ್ಯಾಯಾಲಯಕ್ಕೆ ಪ್ರಭಾವ ಬೀರಲು ಸಾಧ್ಯವೇ? ನ್ಯಾಯಾಧೀಶರನ್ನು ಕೈಹಿಡಿದು ಹೀಗೆ ಮಾಡಿ ಎಂದು ಹೇಳಲು ಸಾಧ್ಯವಿಲ್ಲ. ಮುಂದಿನ ಕ್ರಮ ಕುರಿತು ಕ್ಯಾಬಿನೆಟ್ನಲ್ಲಿತೀರ್ಮಾನಿಸಲಾಗುವುದು.ಅಲ್ಲಿಸುಪ್ರೀಂ ಕೋರ್ಟ್ಗೆ ಹೋಗುವ ವಿಚಾರವೂ ಚರ್ಚೆಯಾಗಲಿದೆ” ಎಂದು ಪರಮೇಶ್ವರ್ ತಿಳಿಸಿದರು.
ದೆಹಲಿಯಲ್ಲಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರನ್ನು ಭದ್ರತಾ ಸಿಬ್ಬಂದಿ ತಳ್ಳಾಡಿದ್ದಾರೆ ಎಂಬ ಕುರಿತು ಪತ್ರಕರ್ತರು ಕೇಳಿದ ಪ್ರಶ್ನೆಗೆ ಡಾ. ಜಿ. ಪರಮೇಶ್ವರ ಅವರು ಪ್ರತಿಕ್ರಿಯಿಸಿ ಪ್ರತಿಭಟನೆಗಳು ಹಾಗೂ ಬೃಹತ್ ಜನಸಮೂಹ ಸೇರುವ ಸಂದರ್ಭಗಳಲ್ಲಿ ಭದ್ರತಾ ವ್ಯವಸ್ಥೆ ನಿರ್ವಹಿಸುವುದು ಸವಾಲಿನ ಕೆಲಸವಾಗಿರುತ್ತದೆ. ಹಿಂದೆ ತಾವೂ ಹಲವು ಪ್ರತಿಭಟನೆಗಳಲ್ಲಿ ಭಾಗವಹಿಸಿದಾಗ ಇಂತಹ ಅನುಭವಗಳನ್ನು ಎದುರಿಸಿರುವುದಾಗಿ ಹೇಳಿದರು.
ಪ್ರತಿಭಟನೆ ನಡೆಯುವ ಸಂದರ್ಭದಲ್ಲಿ ಜನಸಂದಣಿಯನ್ನು ನಿಯಂತ್ರಿಸುವುದು ಸುಲಭವಲ್ಲ. ರಾಹುಲ್ ಗಾಂಧಿ ಅವರಿಗೆ ಭದ್ರತೆ ಒದಗಿಸುವುದು ಅಲ್ಲಿನ ಭದ್ರತಾ ಸಿಬ್ಬಂದಿಯ ಪ್ರಮುಖ ಜವಾಬ್ದಾರಿಯಾಗಿರುತ್ತದೆ. ಅವರ ಬಳಿ ಯಾರೂ ಸುಲಭವಾಗಿತೆರಳದಂತೆನೋಡಿಕೊಳ್ಳುವುದುಭದ್ರತಾ ನಿಯಮಗಳ ಭಾಗವಾಗಿದೆ. ದುರದೃಷ್ಟವಶಾತ್ ಆ ಸಂದರ್ಭದಲ್ಲಿ ಮುಖ್ಯಮಂತ್ರಿಗಳೂ ಅಲ್ಲಿಗೆ ತೆರಳಿದ್ದು, ಜನಸಂದಣಿಯ ನಡುವೆ ಅವರನ್ನು ಸ್ವಲ್ಪ ತಳ್ಳಲಾಗಿದೆ ಎಂದು ವಿವರಿಸಿದರು.
ಮುಖ್ಯಮಂತ್ರಿಗಳಿಗೆ ಶಿಷ್ಟಾಚಾರವಿದ್ದರೂ ಭದ್ರತೆಯ ದೃಷ್ಟಿಯಿಂದ ಇಂತಹ ಸಂದರ್ಭಗಳಲ್ಲಿ ಸಿಬ್ಬಂದಿ ಮುಖ್ಯಮಂತ್ರಿಗಳಾಗಲಿ, ಇತರ ಗಣ್ಯರಾಗಲಿ ಎಂಬುದನ್ನು ನೋಡದೆ, ತಮಗೆ ವಹಿಸಿರುವ ವ್ಯಕ್ತಿಯ ಭದ್ರತೆಗೆ ಆದ್ಯತೆ ನೀಡುತ್ತಾರೆ ಎಂದು ತಿಳಿಸಿದರು.
ದೆಹಲಿಯಲ್ಲಿ ನಡೆಯುತ್ತಿರುವ ಪ್ರತಿಭಟನೆಗಳ ಕುರಿತು ಪ್ರತಿಕ್ರಿಯಿಸಿದ ಡಾ. ಜಿ. ಪರಮೇಶ್ವರ ಅವರು, ಸಂವಿಧಾನಾತ್ಮಕ ಸಂಸ್ಥೆಗಳು ತಮ್ಮ ಜವಾಬ್ದಾರಿಗಳನ್ನು ನಿಷ್ಪಕ್ಷಪಾತವಾಗಿ ನಿರ್ವಹಿಸಬೇಕು ಎಂಬುದು ಪ್ರತಿಭಟನೆಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು. ದೇಶದ ವಿವಿಧ ಭಾಗಗಳಿಂದ ಜನರು ದೆಹಲಿಗೆ ತೆರಳಿ ಪ್ರತಿಭಟನೆ ನಡೆಸುತ್ತಿರುವುದು ಯಾವುದೇಕಾರಣವಿಲ್ಲದೆಅಲ್ಲ.ಸಂವಿಧಾನಾತ್ಮಕವಾಗಿ ನಡೆಯಬೇಕಾದ ಕಾರ್ಯಗಳು ಸರಿಯಾಗಿ ನಡೆಯುತ್ತಿಲ್ಲ ಎಂಬ ಆತಂಕದಿಂದ ಪ್ರತಿಭಟನೆ ಮಾಡಲಾಗುತ್ತಿದೆ. ಚುನಾವಣಾ ಆಯೋಗವು ಸ್ವತಂತ್ರ ಹಾಗೂ ನಿಷ್ಪಕ್ಷಪಾತ ಸಂಸ್ಥೆಯಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ವ್ಯಕ್ತಿ ಅಥವಾ ಪಕ್ಷದ ಪ್ರಭಾವಕ್ಕೆ ಒಳಗಾಗಿ ತೀರ್ಮಾನ ಕೈಗೊಳ್ಳಬಾರದು ಎಂದು ಹೇಳಿದರು.

ದೀಪಾವಳಿ ಬಳಿಕ ಯುಪಿಐ ಶುಲ್ಕ

ನವದೆಹಲಿ : ಎರಡು ಸಾವಿರ ರೂಪಾಯಿಗೆ ಮೀರಿದ ಯುಪಿಐ ವಹಿವಾಟುಗಳಿಗೆ ಶೇ. 2ರಷ್ಟು ಶುಲ್ಕ ವಿಧಿಸುವ ನಿಯಮವನ್ನು ದೀಪಾವಳಿ ಹಬ್ಬದ ನಂತರ ಜಾರಿಗೆ ತರಲು ತೀರ್ಮಾನಿಸಲಾಗಿದೆ. ಯುಪಿಐ ವಹಿವಾಟುಗಳ ಮೇಲಿನ ಶೇ. 2 ರಷ್ಟು ಶುಲ್ಕ ವಿಧಿಸುವ ಪ್ರಸ್ತಾವನೆ ಕುರಿತಂತೆ ಈ ನಿಯಮವನ್ನು ಮುಂದೂಡುವಂತೆ ವ್ಯಾಪಾರಿಗಳು ಮನವಿ ಮಾಡಿದ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಹಬ್ಬದ ಸಂದರ್ಭದಲ್ಲಿ ವ್ಯಾಪಾರ ವಹಿವಾಟು ಹೆಚ್ಚಾಗಲಿದ್ದು, ಹೊಸ ಶುಲ್ಕ ಜಾರಿಗೊಳಿಸಿದರೆ ಹೆಚ್ಚಾಗಬಹುದು ಎಂಬ ಆತಂಕ ವ್ಯಕ್ತವಾಗಿತ್ತು. ಈ ಹಿನ್ನೆಲೆಯಲ್ಲಿ ವ್ಯಾಪಾರಿ ಸಂಘಟನೆಗಳು, ಫಿನ್‌ಟೆಕ್ ಕಂಪನಿಗಳು ಮತ್ತು ಪಾವತಿ ಸೇವಾ ಸಂಸ್ಥೆಗಳು ಶುಲ್ಕ ಜಾರಿಯನ್ನು ಮುಂದೂಡುವಂತೆ ಎನ್‌ಪಿಸಿಐಗೆ ಮನವಿ ಮಾಡಿದ್ದವು. ಈ ಮೊದಲು ಅಕ್ಟೋಬರ್ 15 ರಿಂದ 2 ಸಾವಿರ ಮೀರಿದ ವಹಿವಾಟಿಗೆ ಶೇ. 2 ರಷ್ಟು ಶುಲ್ಕ ವಿಧಿಸುವ ನಿಯಮವನ್ನು ಅ. 15 ರಿಂದ ಜಾರಿಗೆ ತರಲು ಕೇಂದ್ರ ಸರ್ಕಾರ ತೀರ್ಮಾನಿಸಿತ್ತು.
ದೀಪಾವಳಿ ಹಬ್ಬದ ಬಳಿಕ ನವೆಂಬರ್ 2ನೇ ವಾರದಿಂದ ಯುಪಿಐ ವಹಿವಾಟಿನ ಶುಲ್ಕ ಜಾರಿಗೆ ಬರಲಿದೆ.
ಈ ಹಿಂದೆ ಪ್ರಕಟಿಸಿದ ವೇಳಾಪಟ್ಟಿಯಂತೆ ಅಕ್ಟೋಬರ್ 15ರಿಂದಲೇ ಹೊಸ ಶುಲ್ಕ ವ್ಯವಸ್ಥೆ ಜಾರಿಗೆ ಬರಬೇಕಿತ್ತು. ಆದರೆ ಹಬ್ಬದ ಮಾರಾಟದ ಅವಧಿಯಲ್ಲಿ ವ್ಯಾಪಾರಿಗಳಿಗೆ ಹೆಚ್ಚುವರಿಹೊರೆಬೀಳದಂತೆನೋಡಿಕೊಳ್ಳಲು ಅನುಷ್ಠಾನವನ್ನು ಮುಂದೂಡಲಾಗಿದೆ. ಈ ಕುರಿತುಪಾಲುದಾರಸಂಸ್ಥೆಗಳಿಗೆಶೀಘ್ರದಲ್ಲೇ ಹೊಸ ದಿನಾಂಕ ತಿಳಿಸಲಾಗುವುದು ಎಂದು ವರದಿಯಾಗಿದೆ.



ಬ್ಯಾಂಕ್ ಖಾತೆಯಿಂದ ಹಣ ಕಡಿತಗೊಳಿಸಿ ಮಾಡುವ 2,000 ಮೀರಿದ ನಿರ್ದಿಷ್ಟ ವ್ಯಾಪಾರಿ ಯುಪಿಐ ಪಾವತಿಗಳಿಗೆ ಶೇ. 0.4ರಷ್ಟು ಒಆಖ ವಿಧಿಸುವ ಪ್ರಸ್ತಾವನೆ ಇದೆ. ಪ್ರತಿ ವಹಿವಾಟಿಗೆ ಗರಿಷ್ಠ ಶುಲ್ಕವನ್ನು 300ಕ್ಕೆ ಮಿತಿಗೊಳಿಸಲಾಗಿದೆ.
ಉದಾಹರಣೆಗೆ, ಈ ದರ ಅನ್ವಯವಾಗುವ 10,000 ಮೊತ್ತದ ಪಾವತಿಗೆ ?40 ಒಆಖ ಶುಲ್ಕವಾಗಲಿದೆ. ?75,000 ಅಥವಾ ಅದಕ್ಕಿಂತ ಹೆಚ್ಚಿನ ಅರ್ಹ ವಹಿವಾಟಿಗೆ ಶೇ. 0.4ರ ಲೆಕ್ಕಾಚಾರದಲ್ಲಿ ?300 ಅಥವಾ ಅದಕ್ಕಿಂತ ಹೆಚ್ಚು ಶುಲ್ಕ ಬರಬಹುದಾದರೂ, ನಿಗದಿತ ಗರಿಷ್ಠ ಮಿತಿಯ ಕಾರಣ ?300ಕ್ಕಿಂತ ಹೆಚ್ಚು ವಿಧಿಸುವಂತಿಲ್ಲ.
ಆದರೆ ಈ ಶುಲ್ಕ ಎಲ್ಲ ಯುಪಿಐ ಪಾವತಿಗಳಿಗೂ ಅನ್ವಯಿಸುವುದಿಲ್ಲ. ವೈಯಕ್ತಿಕರಿಂದ ವೈಯಕ್ತಿಕರಿಗೆ ಮಾಡುವ ಹಣ ವರ್ಗಾವಣೆಗಳಿಗೆ ಶುಲ್ಕ ಇರುವುದಿಲ್ಲ. 2,000ವರೆಗಿನವ್ಯಾಪಾರಿವಹಿವಾಟುಗಳಿಗೂ ವಿನಾಯಿತಿ ಮುಂದುವರಿಯಲಿದೆ. ನಿಗದಿತ ಅರ್ಹತೆಯಡಿ ಬರುವ ಸಣ್ಣ ವ್ಯಾಪಾರಿಗಳ ವಹಿವಾಟುಗಳಿಗೂ ವಿನಾಯಿತಿ ಇದೆ.
ಕೇಂದ್ರ ಹಣಕಾಸು ಸಚಿವಾಲಯದ ಸೆಪ್ಟೆಂಬರ್ 15ರ ಪ್ರಕಟಣೆಯ ಪ್ರಕಾರ, ವೈಯಕ್ತಿಕಹಣವರ್ಗಾವಣೆಗಳುಸಂಪೂರ್ಣ ಉಚಿತವಾಗಿಯೇ ಮುಂದುವರಿಯಲಿವೆ. 2,000ವರೆಗಿನ ವ್ಯಾಪಾರಿ ಪಾವತಿಗಳು ಮತ್ತು ಶೂನ್ಯ ಒಆಖ ವ್ಯವಸ್ಥೆಯಡಿ ಬರುವ ಸಣ್ಣ ವ್ಯಾಪಾರಿಗಳ ವಹಿವಾಟುಗಳೂ ಶುಲ್ಕದಿಂದ ಹೊರತಾಗಿರಲಿವೆ. ಹೀಗಾಗಿ ಒಟ್ಟು ವ್ಯಾಪಾರಿ ಯುಪಿಐ ವಹಿವಾಟುಗಳಲ್ಲಿ ಸುಮಾರು ಶೇ. 96ರಷ್ಟು ವಹಿವಾಟುಗಳಿಗೆ ಈ ಬದಲಾವಣೆಯಿಂದ ಪರಿಣಾಮ ಬೀರುವುದಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿತ್ತು.
ಆದ್ದರಿಂದ ಹೊಸ ವ್ಯವಸ್ಥೆಯು ಯುಪಿಐ ಬಳಸುವ ಪ್ರತಿಯೊಬ್ಬ ಗ್ರಾಹಕರಿಗೂ ಶುಲ್ಕ ವಿಧಿಸುವ ಕ್ರಮವಲ್ಲ. ನಿಗದಿತ ಷರತ್ತುಗಳನ್ನು ಪೂರೈಸುವ ಆಯ್ದ ವ್ಯಾಪಾರಿ ಪಾವತಿಗಳಿಗೆ ಮಾತ್ರ ಅನ್ವಯಿಸುವ ಪ್ರಸ್ತಾವನೆಯಾಗಿದೆ.
ಆಲ್ ಇಂಡಿಯಾ ಮೊಬೈಲ್ ರೀಟೇಲರ್ಸ್ ಅಸೋಸಿಯೇಷನ್ ಸೇರಿದಂತೆ ವ್ಯಾಪಾರ ವಲಯದ ಸಂಘಟನೆಗಳು ಹೊಸ ಶುಲ್ಕ ವ್ಯವಸ್ಥೆಯನ್ನು ಜಾರಿಗೊಳಿಸುವ ಸಮಯದ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದವು. ದೀಪಾವಳಿ ಸಂದರ್ಭದಲ್ಲಿ ಮೊಬೈಲ್, ಎಲೆಕ್ಟ್ರಾನಿಕ್ಸ್, ಗೃಹೋಪಯೋಗಿ ವಸ್ತುಗಳು ಸೇರಿದಂತೆ ಹಲವು ಉತ್ಪನ್ನಗಳ ಮಾರಾಟ ಹೆಚ್ಚಾಗುತ್ತದೆ. ಈ ಅವಧಿಯಲ್ಲಿ ಗ್ರಾಹಕರು ಡಿಜಿಟಲ್ ಪಾವತಿಗಳಿಗೆ ಹೆಚ್ಚು ಒಲವು ತೋರುವುದರಿಂದ, ಹೆಚ್ಚುವರಿ ವಹಿವಾಟು ವೆಚ್ಚವ್ಯಾಪಾರಿಗಳಲಾಭದಮೇಲೆಪರಿಣಾಮ ಬೀರಬಹುದು ಎಂಬುದು ಅವರ ಆತಂಕ. ಆಲ್ ಇಂಡಿಯಾ ಕನ್ಸ್ಯೂಮರ್ ಪ್ರಾಡಕ್ಟ್ಸ್ ಡಿಸ್ಟ್ರಿಬ್ಯೂಟರ್ಸ್ ಫೆಡರೇಷನ್ ಸೇರಿದಂತೆ ಇತರ ಸಂಘಟನೆಗಳೂ ಜಾರಿಯನ್ನು ಮುಂದೂಡುವಂತೆ ಮನವಿ ಮಾಡಿದ್ದವು.
ಸಣ್ಣ ವ್ಯಾಪಾರಿಗಳಿಗೆ ಹೆಚ್ಚಿನ ವಿನಾಯಿತಿ ನೀಡಬೇಕು ಮತ್ತು ವ್ಯಾಪಾರಿಯಿಂದ ವ್ಯಾಪಾರಿಗೆ ನಡೆಯುವ ವಹಿವಾಟುಗಳಿಗೂ ಸ್ಪಷ್ಟ ವಿನಾಯಿತಿ ಕಲ್ಪಿಸಬೇಕು ಎಂಬ ಬೇಡಿಕೆಗಳು ಕೇಳಿಬಂದಿದ್ದವು.
ಇದಲ್ಲದೆ, ವಿವಿಧ ಬಗೆಯ ಯುಪಿಐ ವಹಿವಾಟುಗಳಿಗೆ ಅನ್ವಯಿಸುವ ದರಗಳು, ವರ್ಗೀಕರಣ ಮತ್ತು ಶುಲ್ಕದ ಹೊಣೆಗಾರಿಕೆ ಕುರಿತು ಪಾವತಿ ಉದ್ಯಮದಲ್ಲಿ ಗೊಂದಲಗಳಿವೆ ಎಂಬ ಅಂಶವೂ ಮುಂದೂಡಿಕೆಗೆ ಕಾರಣವಾಗಿದೆ. ಹೊಸ ನಿಯಮಗಳನ್ನು ಜಾರಿಗೊಳಿಸುವ ಮೊದಲು ಬ್ಯಾಂಕ್‌ಗಳು, ಪಾವತಿ ಕಂಪನಿಗಳು ಮತ್ತು ವ್ಯಾಪಾರಿಗಳು ತಮ್ಮ ವ್ಯವಸ್ಥೆಗಳನ್ನು ಸಿದ್ಧಪಡಿಸಿಕೊಳ್ಳಲು ಹೆಚ್ಚಿನ ಸಮಯ ಬೇಕಾಗಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.
ಎಂಡಿಆರ್ ಎಂದರೆ ಡಿಜಿಟಲ್ ಪಾವತಿಯನ್ನು ಸಂಸ್ಕರಿಸುವ ಬ್ಯಾಂಕ್ ಅಥವಾ ಪಾವತಿ ಸೇವಾ ಸಂಸ್ಥೆಗೆ ವ್ಯಾಪಾರಿ ಪಾವತಿಸುವ ಶುಲ್ಕ. ಇದು ಸರ್ಕಾರ ವಿಧಿಸುವ ತೆರಿಗೆಯಲ್ಲ. ನಿಗದಿತ ಚೌಕಟ್ಟಿನ ಪ್ರಕಾರ ಈ ಮೊತ್ತವು ಬ್ಯಾಂಕ್‌ಗಳು ಮತ್ತು ಪಾವತಿ ವ್ಯವಸ್ಥೆಯ ವಿವಿಧ ಪಾಲುದಾರರಿಗೆ ಹಂಚಿಕೆಯಾಗುತ್ತದೆ.
ಗ್ರಾಹಕರಿಗೆ ನೇರವಾಗಿ ಹೆಚ್ಚುವರಿ ಶುಲ್ಕ ವಿಧಿಸುವ ಬದಲು ವ್ಯಾಪಾರಿಗಳೇ ಒಆಖ ಪಾವತಿಸಬೇಕೆಂಬ ನಿಯಮವಿದೆ. ಆದರೂ ತಮ್ಮ ವೆಚ್ಚ ಹೆಚ್ಚಾದರೆ ಕೆಲವು ವ್ಯಾಪಾರಿಗಳು ವಸ್ತುಗಳ ಬೆಲೆ ಅಥವಾ ಇತರ ಶುಲ್ಕಗಳ ಮೂಲಕ ಆ ಹೊರೆಯನ್ನು ಗ್ರಾಹಕರಿಗೆ ವರ್ಗಾಯಿಸಬಹುದೇ ಎಂಬ ಆತಂಕ ಉದ್ಯಮ ವಲಯದಲ್ಲಿ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ಶುಲ್ಕದ ಅನ್ವಯ ಮತ್ತು ಗ್ರಾಹಕರ ರಕ್ಷಣೆಗೆ ಸಂಬಂಧಿಸಿದ ನಿಯಮಗಳ ಸ್ಪಷ್ಟತೆ ಮಹತ್ವ ಪಡೆದಿದೆ.

ಕಾಂಗ್ರೆಸ್‌ನಿಂದ ಪ್ರತಿಭಟನಾ ಪಾದಯಾತ್ರೆ



ಹುಬ್ಬಳ್ಳಿ:ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ವಿಧಾನಸಭಾ ಕ್ಷೇತ್ರದ ವಿದ್ಯಾನಗರ ಹಾಗೂ ಉಣಕಲ್ ಬ್ಲಾಕ್ ಕಾಂಗ್ರೆಸ್ ಸಮಿತಿಯ ವತಿಯಿಂದ ಅಂಬೇಡ್ಕರ್ ವೃತ್ತದಿಂದ ಕೊಪ್ಪಿಕರ್ ರಸ್ತೆ ವರೆಗೆ “ಮತ ರಕ್ಷಣೆಗಾಗಿ ಬೃಹತ್ ಪ್ರತಿಭಟನಾ ಪಾದಯಾತ್ರೆ” ನಡೆಸಲಾಯಿತು.
ಚುನಾವಣಾ ಆಯೋಗವು (ECI) ಎಸ್‌ಐಆರ್ (SIR)ಪ್ರಕ್ರಿಯೆಯಲ್ಲಿಆಡಳಿತಾರೂಢಬಿಜೆಪಿ(BJP) ಪಕ್ಷದ ಕೈಗೊಂಬೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಆರೋಪಿಸಿ ಪ್ರತಿಭಟನಾಕಾರರು ಬಿಜೆಪಿ, ಜ್ಞಾನೇಶ್ ಕುಮಾರ್, ಅಮಿತ್ ಶಾ, ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕೊಪ್ಪಿಕರ್ ರಸ್ತೆಯಲ್ಲಿ ಪ್ರತಿಭಾನಕಾರನ್ನು ತಡೆದ ಪೊಲೀಸರು ಬಂಧಿಸಿ ಸಿ ಆರ್ ಗ್ರೌಂಡ್ ಗೆ ಕರೆದುಕೊಂಡು ಹೋಗಿ ಬಿಡುಗಡೆ ಮಾಡಿದರು.
ಪಾದಯಾತ್ರೆಯಲ್ಲಿ ಕಾಂಗ್ರೆಸ್ ಮಹಾನಗರ ಘಟಕದ ಅಧ್ಯಕ್ಷ ಸದಾನಂದ ಡಂಗನವರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಜತ್ ಉಳ್ಳಾಗಡ್ಡಿಮಠ, ಮಾಜಿ ಸಂಸದ ಐ ಜಿ ಸನದಿ, ಶಹಜಾನ್ ಮುಜಾವರ, ಸುವರ್ಣಾ ಕಲ್ಲುಂಟ್ಲಾ, ಸಂದೀಪ್ ಕುಮಾರ್,
ಮೊಹಮ್ಮದ್ ಷರೀಫ್ ಗರ್ಗದ ಸೇರಿದಂತೆ ಕೆಪಿಸಿಸಿ (KPCC), ಡಿಸಿಸಿ (DCC), ಕಾಂಗ್ರೆಸ್ ಪಕ್ಷದ ವಿವಿಧ ಮುಂಚೂಣಿ ಘಟಕಗಳು, ಸೆಲ್‌ಗಳು, ಇಲಾಖೆಗಳ ಪದಾಧಿಕಾರಿಗಳು.

ರಾಷ್ಟ್ರೀಯ ವೀಕ್ಷಕರ ಭೇಟಿ



ನವಲಗುಂದ : ತಾಲ್ಲೂಕಿನ ಮೊರಬ ಗ್ರಾಮದಲ್ಲಿರುವ ದಾನೇಶ್ವರಿ ಫಾರ್ಮ್ ಗೆ ಕೇಂದ್ರ ಪುರಸ್ಕೃತ ಯೋಜನೆಗಳ ರಾಷ್ಟ್ರೀಯ ವೀಕ್ಷಕರಾದ ಲಲಿತ ಜೋಶಿ ಭೇಟಿ ನೀಡಿ ವೀಕ್ಷಣೆ ಮಾಡಿದರು.
ಈ ವೇಳೆ ಮಾತನಾಡಿದ ಅವರು ದೇಶದ ಉತ್ತಮ ಲೈವ್ ಸ್ಟಾಕ್ ಗಳಲ್ಲಿ ದಾನೇಶ್ವರಿ ಫಾರ್ಮ್ ಕೂಡಾ ಒಂದಾಗಿದೆ ಎಂದು ಕುರಿ ಸಾಕಾಣಿಕೆ ಕುರಿತು ಪ್ರಶಂಸೆ ವ್ಯಕ್ತಪಡಿಸಿದ ಅವರು ಕೇಂದ್ರ ಪುರಸ್ಕೃತ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವಲ್ಲಿ ಅಧಿಕಾರಿಗಳು ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.
ಧಾರವಾಡ ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಡಾ. ಎಸ್ ವಿ ಸತ್ತಿ ಮಾತನಾಡಿ ಮೊರಬ ಗ್ರಾಮದಲ್ಲಿ ರಾಷ್ಟ್ರೀಯ ಜಾನುವಾರು ಯೋಜನೆಯಿಂದ ಕೋಟಿ ರೂ ವೆಚ್ಚದಲ್ಲಿ ನಿರ್ಮಾಣವಾದ ಕುರಿ ಸಾಕಾಣಿಕೆ ಘಟಕ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದೂ ಯುವಕರು ಕೃಷಿಯ ಜೊತೆಗೆ ಉಪ ಕಸಬಾಗಿ ಕುರಿ ಆಡು ಕೋಳಿ ಹೈನುಗಾರಿಕೆ ಮಾಡುವದರಿಂದ ರೈತರು ಆರ್ಥಿಕವಾಗಿ ಸದೃಢರಾಗಬಹುದು ಎಂದರು
ದಾನೇಶ್ವರಿ ಫಾರ್ಮ್ ಮಾಲಕ ಮಂಜುನಾಥ ಕಾಲವಾಡ ಮಾತನಾಡಿ ಯುವಕರ ನಗರಗಳಿಗೆ ಉದ್ಯೋಗ ಅರಸಿ ವಲಸೆ ಹೋಗುವ ಬದಲು, ಸ್ವಂತ ಊರಿನಲ್ಲೇ ಗೌರವಯುತವಾಗಿ ಬದುಕಲು ರಾಷ್ಟೀಯ ಜಾನುವಾರು (ಓಐಐ) ಯೋಜನೆ ಲಾಭದಾಯಕವಾಗಿದೆ ಎಂದ ಅವರು ಯೋಜನೆ ಹಾಗೂ ಹೈನುಗಾರಿಕೆ ಲಾಭಾಂಶ ಕುರಿತು ಮಾಹಿತಿ ನೀಡಿದರು.ಇದೆ ವೇಳೆ ಲಲಿತ ಜೋಶಿ ಅವರನ್ನು ಸನ್ಮಾನಿಸಲಾಯಿತು
ನವಲಗುಂದ ಮುಖ್ಯ ಪಶುವೈದ್ಯಾಧಿಕಾರಿ ಪ್ರಕಾಶ ಬೆನ್ನೂರ, ಶಿರೂರು ಪಶು ಚಿಕಿತ್ಸಲಯ ಹಿರಿಯ ಪಶುವೈದ್ಯಾಧಿಕಾರಿ ಡಾ. ಎಸ್ ಕಿರಣಕುಮಾರ, ಮೊರಬ ಪಶು ಆಸ್ಪತ್ರೆಯ ಪಶುವೈದ್ಯಾಧಿಕಾರಿ ಡಾ. ಸ್ಮಿತಾ ಸೇರಿದಂತೆ ಪಶು ಇಲಾಖೆಯ ಅಧಿಕಾರಿಗಳು ಇದ್ದರು.

ಜಾಗೃತಿ ಮೂಡಿಸುವ ಕಾರ್ಯವಾಗಲಿ: ಜಿಲ್ಲಾಧಿಕಾರಿ ಸ್ನೇಹಲ್ .ಆರ್

ಧಾರವಾಡಜಿಲ್ಲೆಯಲ್ಲಿಹೆಚ್.ಐ.ವಿಸೋಂಕಿನ ಪ್ರಮಾಣ ಕಡಿಮೆಯಾಗುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ. ಆದಾಗ್ಯೂ, ಸೋಂಕಿನ ಸಂಪೂರ್ಣ ನಿಯಂತ್ರಣ ಮತ್ತು ತಡೆಗಟ್ಟುವಿಕೆಗಾಗಿ ಜನರಲ್ಲಿ ನಿರಂತರ ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್. ಆರ್ ಅವರು ಹೇಳಿದರು.
ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಚೇರಿ ಆವರಣದಲ್ಲಿ ಜಿಲ್ಲಾಮಟ್ಟದ ಯುವಜನೋತ್ಸವ ಹಾಗೂ ಹೆಚ್.ಐ.ವಿ., ಏಡ್ಸ್ ತಡೆಗಟ್ಟಲು ಪ್ರಚಾರಾಂದೋಲನ ಕಾರ್ಯಕ್ರಮದ ಅಂಗವಾಗಿ ಮ್ಯಾರಥಾನ್‌ಕ್ಕೆ ಚಾಲನೆ ನೀಡಿ, ಮಾತನಾಡಿದರು.
ಯುವಜನರು ಹೆಚ್.ಐ.ವಿ., ಏಡ್ಸ್ ಕುರಿತು ಸರಿಯಾದ ಮಾಹಿತಿಯನ್ನು ಪಡೆದು ಸಮಾಜದಲ್ಲಿ ಅರಿವು ಮೂಡಿಸುವ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಜಿಲ್ಲೆಯಲ್ಲಿ ಹೆಚ್.ಐ.ವಿ ಸೋಂಕಿನ ನಿಯಂತ್ರಣಕ್ಕಾಗಿ ಆರೋಗ್ಯ ಇಲಾಖೆ ಹಾಗೂ ಸಂಬಂಧಿಸಿದ ಸಂಸ್ಥೆಗಳು ಹಲವು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿವೆ. ವಿವೇಕಾನಂದ ರಕ್ತದಾನ ಕೇಂದ್ರ ಸೇರಿದಂತೆ ವಿವಿಧ ಸಂಸ್ಥೆಗಳು ಈ ಕಾರ್ಯದಲ್ಲಿ ಕೈಜೋಡಿಸುತ್ತಿವೆ. ಇಂತಹ ಕಾರ್ಯಕ್ರಮಗಳು ಸಾರ್ವಜನಿಕರಲ್ಲಿ ಸೋಂಕಿನ ಕುರಿತು ಅರಿವು ಮೂಡಿಸಲು ಸಹಕಾರಿಯಾಗಿವೆ. ಜಿಲ್ಲೆಯಲ್ಲಿ ಸೋಂಕಿನ ಪ್ರಮಾಣ ಇಳಿಕೆಯಾಗುತ್ತಿದ್ದರೂ ಜಾಗೃತಿ ಕಾರ್ಯವನ್ನು ನಿರಂತರವಾಗಿ ಮುಂದುವರಿಸುವುದು ಅಗತ್ಯವಾಗಿದೆ ಎಂದು ಅವರು ತಿಳಿಸಿದರು.
ಯುವಜನರಲ್ಲಿ ಜಾಗೃತಿ ಮೂಡಿಸುವುದು ಮುಖ್ಯ: ಯುವಜನರು ದೇಶದ ಭವಿಷ್ಯವಾಗಿದ್ದು, ಅವರಲ್ಲಿ ಆರೋಗ್ಯದ ಕುರಿತು ಅರಿವು ಮೂಡಿಸುವುದು ಅತ್ಯಂತ ಮುಖ್ಯವಾಗಿದೆ. ವಿಶೇಷವಾಗಿ 15 ರಿಂದ 25 ವರ್ಷದೊಳಗಿನ ಯುವಕರು ಹೆಚ್.ಐ.ವಿ



ಸೋಂಕಿನ ಬಗ್ಗೆ ಸರಿಯಾದ ಮಾಹಿತಿ ಹೊಂದಿರಬೇಕು. ತಾವು ತಿಳಿದುಕೊಂಡ ಮಾಹಿತಿಯನ್ನು ತಮ್ಮ ಸ್ನೇಹಿತರು, ಸಹಪಾಠಿಗಳು ಹಾಗೂ ಕುಟುಂಬದ ಸದಸ್ಯರೊಂದಿಗೆ ಹಂಚಿಕೊಳ್ಳಬೇಕು. ಈ ಮೂಲಕ ಸಮಾಜದಲ್ಲಿ ಹೆಚ್.ಐ.ವಿ ಸೋಂಕಿನ ಕುರಿತು ಜಾಗೃತಿ ಹೆಚ್ಚಿಸಲು ಸಾಧ್ಯವಾಗುತ್ತದೆ. ಹೆಚ್.ಐ.ವಿ ಸೋಂಕಿನ ಕುರಿತು ಕೇವಲ ಮ್ಯಾರಥಾನ್ ಅಥವಾ ಒಂದು ದಿನದ ಕಾರ್ಯಕ್ರಮ ಆಯೋಜಿಸುವುದರಿಂದ ಮಾತ್ರ ನಿರೀಕ್ಷಿತ ಫಲಿತಾಂಶ ಪಡೆಯಲು ಸಾಧ್ಯವಿಲ್ಲ. ಬದಲಾಗಿ, ಈ ವಿಷಯದ ಕುರಿತು ಯುವಜನರು ಪರಸ್ಪರ ಚರ್ಚೆ ನಡೆಸಬೇಕು. ಸೋಂಕು ಹರಡುವ ವಿಧಾನಗಳು, ತಡೆಗಟ್ಟುವ ಕ್ರಮಗಳು ಹಾಗೂ ಚಿಕಿತ್ಸೆಯ ಮಹತ್ವದ ಕುರಿತು ನಿಖರವಾದ ಮಾಹಿತಿಯನ್ನು ಪಡೆದು ಇತರರಿಗೂ ತಿಳಿಸಬೇಕು. ಸಮಾಜದ ಪ್ರತಿಯೊಬ್ಬರೂ ಈ ಕಾರ್ಯದಲ್ಲಿ ಕೈಜೋಡಿಸಿದಾಗ ಮಾತ್ರ ಸೋಂಕು ನಿಯಂತ್ರಣದ ಗುರಿ ಸಾಧಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.
ಸೋಂಕಿತರು ಭಯಪಡದೆ ಚಿಕಿತ್ಸೆ ಪಡೆಯಬೇಕು: ಹೆಚ್.ಐ.ವಿ ಸೋಂಕು ದೃಢಪಟ್ಟವರು ಸಮಾಜದ ಭಯದಿಂದ ಅಥವಾ ಇತರರು ತಮ್ಮನ್ನು ದೂರವಿಡುತ್ತಾರೆ ಎಂಬ ಆತಂಕದಿಂದ ಚಿಕಿತ್ಸೆ ಪಡೆಯುವುದನ್ನು ನಿಲ್ಲಿಸಬಾರದು. ಸೋಂಕಿತರ ಬಗ್ಗೆ ತಾರತಮ್ಯ ಮಾಡದೆ, ಅವರಿಗೆ ಗೌರವ ಮತ್ತು ಸಹಕಾರ ನೀಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಹೆಚ್.ಐ.ವಿ ಸೋಂಕಿಗೆ ಒಳಗಾದವರು ವೈದ್ಯರ ಸಲಹೆಯಂತೆ ನಿಯಮಿತವಾಗಿ ಆಂಟಿರೆಟ್ರೋವೈರಲ್ ಥೆರಪಿ (ಎಆರ್‌ಟಿ) ಚಿಕಿತ್ಸೆಯನ್ನು ಪಡೆಯಬೇಕು. ಈ ಚಿಕಿತ್ಸೆಯು ದೇಹದಲ್ಲಿನ ವೈರಸ್ ಪ್ರಮಾಣವನ್ನು ನಿಯಂತ್ರಿಸಲು ಹಾಗೂ ರೋಗನಿರೋಧಕ ಶಕ್ತಿಯನ್ನು ಕಾಪಾಡಿಕೊಳ್ಳಲು ನೆರವಾಗುತ್ತದೆ.ಚಿಕಿತ್ಸೆಯನ್ನುನಿರಂತರವಾಗಿ ಪಡೆಯುವುದರಿಂದ ಸೋಂಕಿತರು ದೀರ್ಘಕಾಲ ಆರೋಗ್ಯಕರ ಜೀವನ ನಡೆಸಲು ಸಾಧ್ಯವಾಗುತ್ತದೆ. ಆದ್ದರಿಂದ ಸೋಂಕಿತರು ಯಾವುದೇ ಆತಂಕಕ್ಕೆ ಒಳಗಾಗದೆ ಚಿಕಿತ್ಸೆ ಮುಂದುವರಿಸಬೇಕು ಎಂದು ಹೇಳಿದರು.
ಹೆಚ್.ಐ.ವಿ ಸೋಂಕಿನ ನಿಯಂತ್ರಣಕ್ಕಾಗಿ ಮೂರು ಪ್ರಮುಖ ಗುರಿಗಳನ್ನು ಸಾಧಿಸುವುದು ಅಗತ್ಯವಾಗಿದೆ. ಮೊದಲನೆಯದಾಗಿ, ಸೋಂಕು ಹೊಂದಿರುವವರಲ್ಲಿ ಶೇ.95 ರಷ್ಟು ಜನರನ್ನು ಗುರುತಿಸುವುದು. ಎರಡನೆಯದಾಗಿ, ಗುರುತಿಸಲಾದ ಸೋಂಕಿತರಲ್ಲಿ ಶೇ.95 ರಷ್ಟು ಜನರಿಗೆ ಚಿಕಿತ್ಸೆ ದೊರೆಯುವಂತೆ ಮಾಡುವುದು. ಮೂರನೆಯದಾಗಿ, ಚಿಕಿತ್ಸೆ ಪಡೆಯುತ್ತಿರುವವರಲ್ಲಿ ಶೇ.95 ರಷ್ಟು ಜನರ ದೇಹದಲ್ಲಿನ ವೈರಸ್ ಪ್ರಮಾಣವನ್ನು ನಿಯಂತ್ರಿಸುವುದಾಗಿದೆ.
ಈಮೂರುಗುರಿಗಳನ್ನುಸಾಧಿಸುವಮೂಲಕ ಹೆಚ್.ಐ.ವಿ ಸೋಂಕಿನ ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಜಿಲ್ಲಾ ಕಾರ್ಯಕ್ರಮ ಸಂಯೋಜಕರು ಹಾಗೂ ಸಂಬಂಧಿಸಿದ ಸಿಬ್ಬಂದಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.
ಮಾಧ್ಯಮಗಳಪಾತ್ರಮಹತ್ವದ್ದು:ಹೆಚ್.ಐ.ವಿ ಸೋಂಕಿನ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸೋಂಕಿನ ಲಕ್ಷಣಗಳು ಕಂಡುಬಂದಲ್ಲಿ ಅಥವಾ ಸೋಂಕಿನ ಸಾಧ್ಯತೆಯ ಬಗ್ಗೆ ಆತಂಕವಿದ್ದಲ್ಲಿ ಸೂಕ್ತ ಪರೀಕ್ಷೆ ಮಾಡಿಸಿಕೊಳ್ಳುವಂತೆ ಜನರಿಗೆ ಮಾಹಿತಿ ನೀಡಬೇಕು. ಸೋಂಕು ದೃಢಪಟ್ಟರೆ ವೈದ್ಯರ ಸಲಹೆಯಂತೆ ಚಿಕಿತ್ಸೆ ಆರಂಭಿಸಿ, ಅದನ್ನು ನಿರಂತರವಾಗಿ ಮುಂದುವರಿಸುವಂತೆ ಜಾಗೃತಿ ಮೂಡಿಸಬೇಕು. ಹೆಚ್.ಐ.ವಿ ಸೋಂಕಿನ ಕುರಿತು ಇರುವ ತಪ್ಪು ಕಲ್ಪನೆಗಳನ್ನು ದೂರಮಾಡಿ, ಸೋಂಕಿತರ ಬಗ್ಗೆ ಸಮಾಜದಲ್ಲಿ ಸಹಾನುಭೂತಿ ಮತ್ತು ಗೌರವ ಮನೋಭಾವ ಬೆಳೆಸಬೇಕು. ಪ್ರತಿಯೊಬ್ಬರೂ ಜಾಗೃತಿ ಅಭಿಯಾನದಲ್ಲಿ ಪಾಲ್ಗೊಂಡು, ಸೋಂಕು ನಿಯಂತ್ರಣಕ್ಕೆ ಕೈಜೋಡಿಸಿದಾಗ ಆರೋಗ್ಯಕರ ಸಮಾಜ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಪರಶುರಾಮ್ ಎಫ್.ಕೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಆರ್.ಪಾತ್ರೋಟ ಅವರು ನಿರೂಪಿಸಿ, ವಂದಿಸಿದರು.

ಕಿರುಚಿತ್ರ ಬಿಡುಗಡೆ: ಪ್ರಶಸ್ತಿ ಪ್ರದಾನ

ಧಾರವಾಡ : ನಗರದ ರಂಗಾಯಣದಲ್ಲಿ ಪವರ್ ಆಫ್ ಯೂತ್ಸ್ ಫೌಂಡೇಶನ್ ಸಹಯೋಗದಲ್ಲಿ ಆಯೋಜಿಸಿದ್ದ ಅಂಚೆ ಪತ್ರ' ಶೈಕ್ಷಣಿಕ ಕಿರುಚಿತ್ರದ ಬಿಡುಗಡೆ ಹಾಗೂ ಪ್ರದರ್ಶನ, ತ್ಯಾಗಮಹಿ ಲೂಸಿ' ಕಿರುಚಿತ್ರದ ಪೋಸ್ಟರ್ ಬಿಡುಗಡೆ ಮತ್ತು ಕಾಯಕ ರತ್ನ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಮಾಜಸೇವಕ ಡಾ. ರಮೇಶ್ ಮಹಾದೇವಪ್ಪನವರು ಪಾಲ್ಗೊಂಡು ಕಾರ್ಯಕ್ರಮವನ್ನು ಉದ್ಘಾಟಿಸಿದರು.
ಈಸಂದರ್ಭದಲ್ಲಿಡಾ.ರಮೇಶ್‌ಮಹಾದೇವಪ್ಪನವರಿಗೆ 'ಕಾಯಕರತ್ನರಾಜ್ಯಪ್ರಶಸ್ತಿ'ನೀಡಿಗೌರವಿಸಲಾಯಿತು.
ಕಾರ್ಯಕ್ರಮದಲ್ಲಿ ಶ್ರೀ ಗುರು ಚರಂತಯ್ಯ ಕೊಣ್ಣೂರು ಹಿರೇಮಠ ಅವರು ದಿವ್ಯ ಸಾನಿಧ್ಯ ವಹಿಸಿದ್ದರು. ಅತಿಥಿಗಳಾಗಿ ಬಸವರಾಜ ಗುರಿಕಾರ್, ಮಲ್ಲಿಕಾರ್ಜುನ ತೊದಲಬಾಗಿ, ಲೂಸಿ ಸಾಲ್ಡಾನ, ಡಾ. ಮೋಹನ್ ಕುಮಾರ್, ಜುಬೇದ ಬಾದಾಮಿ, ಕುಮಾರಿ ದೇವಿಕಾ ಹುಬ್ಬಳ್ಳಿ, ರವಿಚಂದ್ರ ದೊಡ್ಡಿಹಾಳ, ಎಲ್ಲೈ ಲಕ್ಕಮ್ಮನವರ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.



ತಾಕತ್ತಿದ್ದರೆ ರಾಜೀನಾಮೆ ನೀಡಿ ಚುನಾವಣೆಗೆ ನಿಲ್ಲಿ: ಯತ್ನಾಳಗೆ ರಜಪೂತ ಸವಾಲು



ವಿಜಯಪುರ: ಬಿಜೆಪಿ ಪಕ್ಷದ ಚಿಹ್ನೆಯಿಂದ ಆಯ್ಕೆಯಾಗಿ, ಇದೀಗ ಅದೇ ಪಕ್ಷದ ವಿರುದ್ಧ ಟೀಕೆ ಮಾಡುತ್ತಿರುವ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರಿಗೆ ಪಕ್ಷದ ಬಗ್ಗೆ ಮಾತನಾಡುವ ನೈತಿಕ ಹಕ್ಕಿಲ್ಲ. ತಮ್ಮ ವೈಯಕ್ತಿಕ ವರ್ಚಸ್ಸಿನ ಮೇಲೆ ಗೆಲ್ಲುವ ಸಾಮರ್ಥ್ಯವಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಚುನಾವಣೆಗೆ ಸ್ಪರ್ಧಿಸಲಿ. ಬಿಜೆಪಿ ಸಾಮಾನ್ಯ ಕಾರ್ಯಕರ್ತನನ್ನೇ ಅವರ ವಿರುದ್ಧ ಕಣಕ್ಕಿಳಿಸಿ ಗೆಲ್ಲಿಸುವ ಮೂಲಕ ಪಕ್ಷದ ಶಕ್ತಿ ತೋರಿಸುತ್ತೇವೆ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಹಾಗೂ ನಗರಸಭೆ ಮಾಜಿ ಅಧ್ಯಕ್ಷ ಪರಶುರಾಮಸಿಂಗ್ ರಜಪೂತ ಸವಾಲು ಹಾಕಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಿಜೆಪಿ ಪಕ್ಷದಿಂದಲೇ ಕೇಂದ್ರ ಮಾಜಿ ಸಚಿವ, ಶಾಸಕ ಯತ್ನಾಳ ಅವರು ಇದೀಗ ಪಕ್ಷದ ರಾಜ್ಯಾಧ್ಯಕ್ಷರು ಹಾಗೂ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ಪಕ್ಷದ ನಾಯಕರ ವಿರುದ್ಧ ಟೀಕೆ ಮಾಡುತ್ತಿರುವುದು ಸರಿಯಲ್ಲ ಎಂದು ಹೇಳಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ ಬಿಜೆಪಿ ಸಂಘಟನೆ ಬಲಿಷ್ಠವಾಗಿದ್ದು, ಸಾವಿರಾರು ಕಾರ್ಯಕರ್ತರು ಪಕ್ಷದ ವಿವಿಧ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದಾರೆ. ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಹೀಗಾಗಿ ಬಿಜೆಪಿ ಸತ್ತಿದೆ ಎಂಬ ಯತ್ನಾಳರ ಹೇಳಿಕೆ ವಾಸ್ತವಕ್ಕೆ ವಿರುದ್ಧವಾಗಿದೆ ಎಂದು ರಜಪೂತ ತಿಳಿಸಿದ್ದಾರೆ.

ಯತ್ನಾಳ ಅವರು ಹಿಂದೆ ಬೇರೆ ಪಕ್ಷದಿಂದ ವಿಜಯಪುರ ನಗರ ಕ್ಷೇತ್ರದಲ್ಲಿ ಸ್ಪರ್ಧಿಸಿ ಸೋತಿದ್ದನ್ನು ಮರೆಯಬಾರದು. ಬಳಿಕ ಬಿಜೆಪಿ ಹಿರಿಯ ನಾಯಕರ ಮನವೊಲಿಕೆಯೊಂದಿಗೆ ಮತ್ತೆ ಪಕ್ಷಕ್ಕೆ ಮರಳಿದ್ದರು. ಇಂದು ತಾವು ಗೆದ್ದಿರುವುದರ ಹಿಂದೆ ಪಕ್ಷದ ಸಂಘಟನೆ ಹಾಗೂ ನಿಷ್ಠಾವಂತ ಕಾರ್ಯಕರ್ತರ ಪರಿಶ್ರಮವಿದೆ ಎಂಬುದನ್ನು ಅವರು ಅರಿತುಕೊಳ್ಳಬೇಕು ಎಂದು ಹೇಳಿದ್ದಾರೆ.

ಪಕ್ಷದ ಬಗ್ಗೆ ಹಾಗೂ ನಾಯಕರ ಕುರಿತು ನೀಡಿರುವ ಹೇಳಿಕೆಗಳಿಗೆ ಯತ್ನಾಳ ಅವರು ಬಹಿರಂಗವಾಗಿ ಕ್ಷಮೆಯಾಚಿಸಬೇಕು. ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆಯಿದ್ದರೆ ರಾಜೀನಾಮೆ ನೀಡಿ ಚುನಾವಣೆಗೆ ಬರಲಿ; ಬಿಜೆಪಿ ಸಾಮಾನ್ಯ ಕಾರ್ಯಕರ್ತನನ್ನು ಎದುರಾಳಿಯಾಗಿ ನಿಲ್ಲಿಸಿ ಗೆಲುವು ಸಾಧಿಸುವ ಮೂಲಕ ಪಕ್ಷದ ಸಾಮರ್ಥ್ಯವನ್ನು ತೋರಿಸುತ್ತೇವೆ ಎಂದು ರಜಪೂತ ತಿಳಿಸಿದ್ದಾರೆ.

ವಿಜಯಪು | ಆಕ್ಷೇಪಣಾ ಅರ್ಜಿ ವಾಪಸ್ ಪಡೆದದ್ದೇಕೆ: ಯತ್ನಾಳ ಬೆಂಬಲಿಗರಿಗೆ ಪ್ರಶ್ನೆ

ವಿಜಯಪುರ: 'ವಿಜಯಪುರ ನಗರ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಗೆ ಸಂಬಂಧಿಸಿ 18 ಸಾವಿರಕ್ಕೂ ಹೆಚ್ಚು ಆಕ್ಷೇಪಣೆ ಸಲ್ಲಿಕೆ ಮಾಡಿದವರು ಯಾರಿಗೆ ಅಂಜಿ ಅರ್ಜಿಗಳನ್ನು ವಾಪಸ್ ಪಡೆದುಕೊಂಡಿದ್ದೀರಿ ಎಂದು ಬಹಿರಂಗಪಡಿಸಿ' ಎಂದು ಮಹಾನಗರ ಪಾಲಿಕೆ ಮಾಜಿ ಸದಸ್ಯ ಅಬ್ದುಲ್ ರಜಾಕ್ ಹೊರ್ತಿ ಅವರು ಶಾಸಕ ಯತ್ನಾಳ ಬೆಂಬಲಿಗರನ್ನು ಪ್ರಶ್ನಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 8 ಜನ ಮರಣವನ್ನಪ್ಪಿದ್ದಾರೆ, ಅವರ ಹೆಸರನ್ನು ಅಳಿಸಿ ಹಾಕಿ ಎಂದು ಸ್ಪಷ್ಟವಾಗಿ ಶಾಸಕರು ಪತ್ರ ಬರೆದಿದ್ದಾರೆ. ಆದರೆ, ಶಾಸಕರು ಪರಿಶೀಲನೆ ಮಾಡಿ ಎಂದು ಹೇಳಿದ್ದಾರೆ ಎಂದು ಸುಳ್ಳು ಹೇಳಿ ಅವರ ಬೆಂಬಲಿಗರು ಸಮರ್ಥಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ.

ಅಲ್ಲದೇ, ಶಾಸಕರ ಪತ್ರಕ್ಕೆ ಆಯುಕ್ತರು ಉತ್ತರ ನೀಡಿ, ಶಾಸಕರ ಅರ್ಜಿಯನ್ನು ತಿರಸ್ಕರಿಸಿದ್ದಾರೆ, ಈ ಬಗ್ಗೆ ಚುನಾವಣಾಧಿಕಾರಿಗಳಿಗೂ ವರದಿ ನೀಡಿದ್ದಾರೆ ಎಂದರು.ಸಾಲ, ವಿಮೆ ಪಡೆಯಲು ಮುಸ್ಲಿಂ ವ್ಯಕ್ತಿಗಳು ಮರಣ ಪ್ರಮಾಣ ಪತ್ರ ಮಾರ್ಗ ಬಳಸುತ್ತಾರೆ ಎಂದು ಹೇಳಿರುವ ಶಾಸಕ ಬಸನಗೌಡ ಪಾಟೀಲ ಯತ್ನಾಳ ಬೆಂಬಲಿಗರಿಗೆ ನಾಚಿಕೆಯಾಗಬೇಕು. 8 ಜನರು ಅಮಾಯಕರು, ಬಡವರು ಅವರು ಯಾವ ಬ್ಯಾಂಕಿನಲ್ಲಿ ಸಾಲ ಪಡೆಯಬೇಕು?' ಎಂದು ಕಿಡಿ–ಕಾರಿದರು.ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ಇರ್ಫಾನ್ ಶೇಖ್ ಅವರು ತಮ್ಮ ತಂದೆಯ ಮರಣ ಉತಾರೆಗೆ ಅರ್ಜಿ ಸಲ್ಲಿಸಿದ್ದು ಇದೆ.

ಅದರೆ, ಅವರ ಹೆಸರು ಮತಪಟ್ಟಿಯಲ್ಲಿ ಇದೆ ಎಂದು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಕರಡು ಮತ ಪಟ್ಟಿ ತಯಾರಿಸುವುದು ಇರ್ಫಾನ್ ಶೇಖ್ ಕೆಲಸವೇ? ಈ ತಪ್ಪು ನಡೆದಿದ್ದರೆ ನಿಮ್ಮ ಪಕ್ಷದ ಬಿ.ಎಲ್.ಎ. ಏನು ಮಾಡುತ್ತಿದ್ದರು' ಎಂದು ಪ್ರಶ್ನಿಸಿದರು. ನಿಮ್ಮ ಪಕ್ಷದ ರಾಜ್ಯ ಘಟಕದ ಅಧ್ಯಕ್ಷರೇ ನಿಮ್ಮನ್ನು ನಾಲಾಯಕರು ಎಂದು ಕರೆದಿದ್ದಾರೆ' ಎಂದರು.ಪಾಕಿಸ್ತಾನಕ್ಕೆ ಹೋಗಿ: 'ನಾವು ಕೇಸರಿ ಶಲ್ಯ ಹಾಕಿದ್ದೇವೆ, ನಾವು ಹಿಂದೂಗಳು ಎನ್ನಲು ಹಿಂದೇಟು ಹಾಕುವುದಿಲ್ಲ. ಆದರೆ, ಈ ಹಿಂದೆ ಮುಸ್ಲಿಂ ಟೊಪ್ಪಿ ಹಾಕಿರುವ ನೀವು ಮುಸ್ಲಿಂ ಇದ್ದಂತೆ. ನೀವು ಪಾಕಿಸ್ತಾನಕ್ಕೆ ಹೋಗಿ' ಎಂದು ವ್ಯಂಗ್ಯವಾಡಿದರು.

ವಿಜಯಪುರದಲ್ಲಿ ಎಸ್‌ಐಆರ್ ಪ್ರಕ್ರಿಯೆ ದೋಷಪೂರಿತ ಎಂದ ಬಿಜೆಪಿ ಮುಖಂಡ



ವಿಜಯಪುರ: ವಿಜಯಪುರ ನಗರ ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಐಆರ್ ಪ್ರಕ್ರಿಯೆ ದೋಷಪೂರಿತವಾಗಿವೆ. ಅನೇಕ ಗೊಂದಲಗಳು ಉಳಿದುಕೊಂಡಿವೆ. ಎಸ್‌ಐಆರ್ ಸಮರ್ಪಕವಾಗಿ ನಡೆಯುವ ಅಗತ್ಯವಿದೆ ಎಂದು ಬಿಜೆಪಿ ಮುಖಂಡ ಶಂಕರ ಹೂಗಾರ ಹೇಳಿದರು.

ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಕರಡು ಮತದಾರರ ಪಟ್ಟಿಯಲ್ಲಿ ಇರುವ ಅನೇಕ ಮತದಾರರ ಭಾವಚಿತ್ರಗಳು ಸ್ಪಷ್ಟವಾಗಿ ಕಾಣಿಸುತ್ತಿಲ್ಲ, ಡಬಲ್ ವೋಟರ್ ಇರುವುದು, ಮೃತ ಪಟ್ಟವರ ಹೆಸರು ಉಳಿದುಕೊಂಡಿವೆ ಎಂದು ಆರೋಪಿಸಿದರು.

ಶಾಸಕ ಯತ್ನಾಳ ಅವರು ಈ ಕುರಿತು ಜಿಲ್ಲಾಧಿಕಾರಿಗೆ ಸಮಗ್ರ ಮಾಹಿತಿ ನೀಡಿದ್ದು, ಸಂಶಯ ಇರುವ ಮತದಾರರ ಬಗ್ಗೆ ಪರಿಶೀಲನೆ ನಡೆಸಿ, ಸೂಕ್ತ ಕ್ರಮ ಕೈಗೊಳ್ಳುವಂತೆ ಹೇಳಿದ್ದಾರೆ. ಆದರೆ, ಇಆರ್‌ಒ ಅವರು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಇದುವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಹೇಳಿದರು.

ಮರಣ ಉತಾರ ದೊಡ್ಡ ಅಕ್ರಮ: ನಗರದಲ್ಲಿ ನಕಲಿ ಮರಣ ಉತಾರ ಪಡೆಯುತ್ತಿರುವ ದೊಡ್ಡ ದಂದೆ ನಡೆದಿದೆ. ಜೀವಂತ ಇರುವವರೇ ತಮ್ಮ ಹೆಸರಿನಲ್ಲಿ ಮರಣ ಉತಾರವನ್ನು ಪಡೆದು ನಕಲಿ ವೋಟರ್ ಐಟಿ, ನಕಲಿ ಆಧಾರ್ ಕಾರ್ಡ್ ಸೇರಿದಂತೆ ಇತರ ಕಾನೂನು ಬಾಹಿರ ಚಟುವಟಿಕೆಗಳಿಗೆ ಬಳಸುತ್ತಿದ್ದಾರೆ ಎಂದು ಆರೋಪಿಸಿದರು.

ಮಹಾನಗರ ಪಾಲಿಕೆ ಸದಸ್ಯ ಪ್ರೇಮಾನಂದ ಬಿರಾದಾರ ಮಾತನಾಡಿ, ವಿಜಯಪುರ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಇರ್ಫಾನ್ ಶೇಖ್ ಅವರ ತಂದೆ ತೀರಿಕೊಂಡು ಒಂದು ವರ್ಷವಾಗಿದೆ. ಆದರೂ ಕರಡು ಮತದಾರರ ಪಟ್ಟಿಯಲ್ಲಿ ಅವರ ಹೆಸರು ಉಳಿದುಕೊಂಡಿದೆ. ಇರ್ಫಾನ್ ಶೇಖ್ ಕಾಂಗ್ರೆಸ್‌ನ ಬಿಎಲ್‌ಎ 2 ಆಗಿದ್ದರು. ಅಲ್ಲದೇ, ಅವರ ಓಣಿಯವರೇ ಆದ ರಜಿಯಾ ಬೇಗಂ ಅವರು ಬಿಎಲ್‌ಒ ಆಗಿದ್ದರು. ಇಬ್ಬರು ಸೇರಿ ಮತದಾರರ ಪಟ್ಟಿಯಲ್ಲಿ ಸತ್ತವರ ಹೆಸರನ್ನು ಉಳಿಸಿ, ಅಕ್ರಮ ಎಸಗಿದ್ದಾರೆ. ಈ ಪ್ರಕರಣದ ಕುರಿತು ತನಿಖೆಯಾಗಬೇಕು ಎಂದು ಆಗ್ರಹಿಸಿದರು.

ಸ್ವಾಮಿ ವಿವೇಕಾನಂದ ಸೇನೆ ಅಧ್ಯಕ್ಷ ಚಂದ್ರಶೇಖರ ಚೌಧರಿ ಮಾತನಾಡಿ, ಸತ್ತವರನ್ನು ಮತದಾರರ ಪಟ್ಟಿಯಲ್ಲಿ ಉಳಿಯುವಂತೆ ಅಕ್ರಮ ಎಸಗಿರುವ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇರ್ಫಾನ್ ಶೇಖ್ ವಿರುದ್ಧ ಎಫ್‌ಐಆರ್ ದಾಖಲಿಸುತ್ತೇವೆ. ಅವರ ವಿರುದ್ಧ ಕಾನೂನು ಕ್ರಮ ಜರುಗಿಸುತ್ತೇವೆ ಎಂದು ಹೇಳಿದರು.

ಪಾಲಿಕೆ ಸದಸ್ಯ ಗಿರೀಶ ಪಾಟೀಲ ಮಾತನಾಡಿ, ಮತದಾರರ ಪಟ್ಟಿಯಲ್ಲಿ ಇರುವ ಲೋಪದೋಷಗಳನ್ನು ಕಾನೂನು ಚೌಕಟ್ಟಿನಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದೇವೆ. ಆದರೆ, ಕಾಂಗ್ರೆಸ್‌ನವರು ಭಯಭೀತಿ ಸೃಷ್ಟಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಎಸ್‌ಐಆರ್ ಕುರಿತು ಮಾತನಾಡುವ ಬದಲು ಅನ್ಯ ವಿಷಯ ಕುರಿತು ಮಾತನಾಡಿ, ದಿಕ್ಕು ತಪ್ಪಿಸುವ ಹುನ್ನಾರ ನಡೆಸಿದ್ದಾರೆ ಎಂದರು.

ಉದ್ದ ಜಿಗಿತದಲ್ಲಿ ಶ್ರೀರಾಮ್‌ಗೆ ದ್ವಿತೀಯ ಸ್ಥಾನ: ರಾಜ್ಯ ಮಟ್ಟಕ್ಕೆ ಆಯ್ಕೆ



ಕನಕಗಿರಿ: ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಕ್ರೀಡಾಕೂಟದ ಪ್ರಾಥಮಿಕ ಶಾಲಾ ವಿಭಾಗದ ಉದ್ದ ಜಿಗಿತ ಸ್ಪರ್ಧೆಯಲ್ಲಿ ವಸತಿ ಶಾಲೆಯ ವಿದ್ಯಾರ್ಥಿ ಶ್ರೀರಾಮ್ ದ್ವಿತೀಯ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಯ ಸಾಧನೆಗೆ ಶಾಲೆಯ ಪ್ರಾಂಶುಪಾಲ ಶೇಖಪ್ಪ ಅರಶಣಗಿ ಹರ್ಷ ವ್ಯಕ್ತಪಡಿಸಿದ್ದಾರೆ.

ಶ್ರೀರಾಮ್‌ನ ಸಾಧನೆಗೆ ದೈಹಿಕ ಶಿಕ್ಷಣ ಶಿಕ್ಷಕ ಬಾಬು ಎಸ್. ನಡುವಿನಮನಿ, ಶಿಕ್ಷಕರಾದ ಶರಣಪ್ಪ ಎಂ., ಅರುಣ ಪರಶುರಾಮ, ಝಾಕೀರಹುಸೇನ್ ನದಾಫ್, ಕನಕರಾಯ ಡಗ್ಗಿ, ಬಾಬರ್ ಪಾಷಾ, ಎಸ್.ಎಫ್. ಪಟೇಲ್, ಮಹೆಬೂಬ,

ತಾಜುದ್ದೀನ್, ಸುಜಾತಾ, ದೇವೇಂದ್ರಪ್ಪ ಹಾಗೂ ಪಾಲಕ ಬಾಲನಗೌಡ ಅಭಿನಂದನೆ ಸಲ್ಲಿಸಿದ್ದಾರೆ.

ಬರ ಪರಿಹಾರಕ್ಕೂ ಹಣವಿಲ್ಲ: ಬಿ.ವೈ. ವಿಜಯೇಂದ್ರ ಆರೋಪ



ಸಿಂದಗಿ: 'ಕಾಂಗ್ರೆಸ್ ಸರ್ಕಾರವು ರೈತ ವಿರೋಧಿ ನೀತಿ ಅನುಸರಿಸುತ್ತಿದೆ. ಸರ್ಕಾರ 4.5 ಲಕ್ಷ ಕೋಟಿ ಸಾಲ ಮಾಡಿದೆ. ರಾಜ್ಯದ ಖಜಾನೆ ಖಾಲಿಯಾಗಿದೆ' ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ನಗರದ ಮಾಂಗಲ್ಯ ಭವನದಲ್ಲಿ ಶುಕ್ರವಾರ ಬಿಜೆಪಿ ಮಂಡಲದಿಂದ ನಡೆದ ಬೂತ್ ವಿಜಯಸಂಕಲ್ಪಯಾತ್ರೆಯಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, 'ಅಹಿಂದ ಹೆಸರಿನಲ್ಲಿ ಅಧಿಕಾರ ಹಿಡಿದಿರುವ ಕಾಂಗ್ರೆಸ್ ಸರ್ಕಾರ ಶೋಷಿತರನ್ನು ವಂಚಿಸಿದೆ. ದೇಶದ್ರೋಹಿಗಳನ್ನು ಮಟ್ಟ ಹಾಕಲು ಬಿಜೆಪಿಗೆ ಅಧಿಕಾರ ನೀಡಬೇಕು' ಎಂದರು.

ಶೇ 90ರಷ್ಟು ರಿಯಲ್ ಎಸ್ಟೇಟ್, ಕೇವಲ ಶೇ 10ರಷ್ಟು ಮಾತ್ರ ರಾಜಕಾರಣ ಎಂದು ಸ್ವತಃ ಸಿಎಂ ಡಿ.ಕೆ. ಶಿವಕುಮಾರ ಹೇಳಿಕೊಂಡಿದ್ದಾರೆ. ಹೀಗಿದ್ದಾಗ ಇವರಿಂದ ರೈತರ ಕಣ್ಣೀರು ಒರೆಸಲು ಸಾಧ್ಯವಾಗುತ್ತದೆಯೇ' ಎಂದು ಪ್ರಶ್ನಿಸಿದರು.

ಮಾಜಿ ಶಾಸಕ ರಮೇಶ ಭೂಸನೂರ ಮಾತನಾಡಿ, 'ಹಿರಿಯ ಸಂಸದ ರಮೇಶ ಜಿಗಜಿಣಗಿಯವರ ಅಭಿವೃದ್ಧಿ ಬಗ್ಗೆ ಸಿಂದಗಿ ಶಾಸಕ ಪ್ರಶ್ನಿಸಿದ್ದಾರೆ. ಸಂಸದರು ತಾವು ಮಾಡಿದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಯಾವತ್ತೂ ಪ್ರಚಾರ ಪಡಿಸಿಲ್ಲ. ಅವರ ರಾಜಕಾರಣದಷ್ಟೂ ನಿಮಗೆ ವಯಸ್ಸಾಗಿಲ್ಲ' ಎಂದರು.

ಶಾಸಕ ಅಶೋಕ ಮನಗೂಳಿ ಅವರು ನನ್ನ ಅವಧಿಯಲ್ಲಿ ಮಂಜೂರಾದ ಕೆಲಸಗಳನ್ನೇ ತಮ್ಮ ಅಭಿವೃದ್ಧಿ ಕಾರ್ಯ ಎಂದು ಹೇಳಿಕೊಳ್ಳುತ್ತಾರೆ. 4 ವರ್ಷಗಳಲ್ಲಿ 20 ಕಿ.ಮೀ ಡಾಂಬರೀಕರಣ ಮಾಡಿದ್ದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ. ಅವರ ಅವಧಿಯಲ್ಲಿ ಮಾಡಿರುವ ಕಾಮಗಾರಿಗಳು ಸಂಪೂರ್ಣ ಕಳಪೆಯಾಗಿವೆ' ಎಂದು ಆರೋಪಿಸಿದರು.

ಸಂಸದ ರಮೇಶ ಜಿಗಜಿಣಗಿ, ಹಾಸನದ ಬಿಜೆಪಿ ಮುಖಂಡ ಪ್ರೀತಂ ಗೌಡ ಮಾತನಾಡಿದರು. ಮಂಡಲ ಅಧ್ಯಕ್ಷ ಸಂತೋಷ ಪಾಟೀಲ ಡಂಬಳ, ಪ್ರಧಾನ ಕಾರ್ಯದರ್ಶಿ ಗುರು ತಳವಾರ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಗುರಲಿಂಗಪ್ಪ ಅಂಗಡಿ, ಮಾಜಿ ಶಾಸಕರಾದ ಎ.ಎಸ್. ಪಾಟೀಲ ನಡಹಳ್ಳಿ, ಅರುಣ ಶಹಾಪುರ, ಸೋಮನಗೌಡ ಪಾಟೀಲ, ಬಿಜೆಪಿ ಮುಖಂಡರಾದ ವಿಜುಗೌಡ ಪಾಟೀಲ, ಉಮೇಶ ಕಾರಜೋಳ, ಬಸವರಾಜ ಯಂಕಂಚಿ, ಸಂಜೀವ ಐಹೊಳೆ, ವಿವೇಕಾನಂದ ಡಬ್ಬಿ, ಚಂದ್ರಶೇಖರ ಕವಟಗಿ, ಈರಣ್ಣ ರಾವೂರ ಇದ್ದರು.

ವಿಜಯಪುರ ಜಿಲ್ಲೆಗೆ 371(ಜೆ) ಮೀಸಲಾತಿ ಕಲ್ಪಿಸಲು ಆಗ್ರಹ



ವಿಜಯಪುರ: ವಿಜಯಪುರ ಜಿಲ್ಲೆಯನ್ನು ಸಂವಿಧಾನದ 371(ಜೆ) ವಿಶೇಷ ಮೀಸಲಾತಿ ವ್ಯಾಪ್ತಿಗೆ ಸೇರ್ಪಡೆಗೊಳಿಸಿ, ಜಿಲ್ಲೆಯ ಜನರಿಗೆ ನ್ಯಾಯ ಒದಗಿಸಬೇಕು ಎಂದು ವಿಜಯಪುರ ಜಿಲ್ಲಾ 371(ಜೆ) ಹೋರಾಟ ಸಮಿತಿ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಅವರಿಗೆ ಮನವಿ ಸಲ್ಲಿಸಿತು.

371(ಜೆ) ಮೀಸಲಾತಿಯಿಂದ ಹೊರಗುಳಿದಿರುವ ವಿಜಯಪುರ ಜಿಲ್ಲೆಯನ್ನು ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಸೇರ್ಪಡೆಗೊಳಿಸಲು ರಾಜ್ಯ ಸರ್ಕಾರದ ಮೂಲಕ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು. ಈ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರ ಗಮನಕ್ಕೂ ತಂದು, ಸಂವಿಧಾನದ 371(ಜೆ) ಗೆ ತಿದ್ದುಪಡಿ ಮಾಡಿ ವಿಜಯಪುರ ಜಿಲ್ಲೆಗೂ ಮೀಸಲಾತಿ ಸೌಲಭ್ಯ ಕಲ್ಪಿಸಬೇಕು ಎಂದು ಸಮಿತಿ ಮುಖಂಡರು ಒತ್ತಾಯಿಸಿದರು.

ಜಿಲ್ಲೆಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸೌಲಭ್ಯ, ಯುವಕರಿಗೆ ಉದ್ಯೋಗ ಮತ್ತು ನೇಮಕಾತಿಯಲ್ಲಿ ಮೀಸಲಾತಿ, ಕಲ್ಯಾಣ ಕರ್ನಾಟಕ ಭಾಗಕ್ಕೆ ದೊರೆಯುವ ವಿಶೇಷ ಅನುದಾನ ಸೇರಿದಂತೆ ವಿವಿಧ ಸೌಲಭ್ಯಗಳು ದೊರೆಯಲು 371(ಜೆ) ವ್ಯಾಪ್ತಿಗೆ ವಿಜಯಪುರ ಜಿಲ್ಲೆಯನ್ನು ಸೇರಿಸುವುದು ಅಗತ್ಯವಾಗಿದೆ. ಸುಮಾರು 25 ಲಕ್ಷ ಜನರ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಈ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಮನವಿ ಸ್ವೀಕರಿಸಿದ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಅವರು, ಹೋರಾಟ ಸಮಿತಿಯ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿದರು. ಈ ವಿಷಯವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಹಾಗೂ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ಗಮನಕ್ಕೆ ತಂದು, ವಿಜಯಪುರ ಜಿಲ್ಲೆಗೆ 371(ಜೆ) ಮೀಸಲಾತಿ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹೋರಾಟ ಸಮಿತಿ ಮುಖಂಡರಾದ ವಿನೋದ ಖೇಡ, ಲಾಯಪ್ಪ ಇಂಗಳೆ, ಅನಿಲ ಇಕ್ಕಡ, ಸಿದ್ದನಗೌಡ ಪಾಟೀಲ, ಮಹಾದೇವಪ್ಪ ತೇಲಿ, ದಶರಥ ರಜಪೂತ, ಶಿವಶಂಕರ ಮಂಗೊಂಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಿಪ್ರೋ ಏರೋಸ್ಪೇಸ್ ಪೂಲ್ ಕ್ಯಾಂಪಸ್‌ಗೆ 150ಕ್ಕೂ ಹೆಚ್ಚು ವಿದ್ಯಾರ್ಥಿಗಳು



ವಿಜಯಪುರ: ಬಿ.ಎಲ್.ಡಿ.ಇ. ಸಂಸ್ಥೆಯ ಶ್ರೀ ಸಂಗನಬಸವ ಮಹಾಸ್ವಾಮೀಜಿ ಪಾಲಿಟೆಕ್ನಿಕ್ ವಿದ್ಯಾಲಯದಲ್ಲಿ ಗುರುವಾರ ವಿಪ್ರೊರೀ ಏರೋಸ್ಪೇಸ್ ವತಿಯಿಂದ ಡಿಪ್ಲೊಮಾ ವಿದ್ಯಾರ್ಥಿಗಳಿಗಾಗಿ ಬೃಹತ್ ಪೂಲ್ ಕ್ಯಾಂಪಸ್ ಉದ್ಯೋಗ ಸಂದರ್ಶನ ನಡೆಯಿತು.

ಮೆಕ್ಯಾನಿಕಲ್ ಹಾಗೂ ಆಟೋಮೊಬೈಲ್ ಎಂಜಿನಿಯರಿಂಗ್ ಅಂತಿಮ ವರ್ಷದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಸಂದರ್ಶನದಲ್ಲಿ ವಿಜಯಪುರ, ಬಾಗಲಕೋಟೆ ಸೇರಿದಂತೆ ವಿವಿಧ ಪಾಲಿಟೆಕ್ನಿಕ್ ಕಾಲೇಜುಗಳ 150ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ವಿಪೊರೀ ಏರೋಸ್ಪೇಸ್‌ನ ಮಾನವ ಸಂಪನ್ಮೂಲ ಅಧಿಕಾರಿಗಳಾದ ಮಿಥಿಲೇಶ ಹಾಗೂ ಮರಿಯಾ ಅವರು ಲಿಖಿತ ಪರೀಕ್ಷೆ ಮತ್ತು ತಾಂತ್ರಿಕ ಸಂದರ್ಶನ ನಡೆಸಿದರು.

ಪ್ರಾಚಾರ್ಯ ಪ್ರಭುದೇವ ಬಿ. ಕಳಸಗೊಂಡ, ಉದ್ಯೋಗಾಧಿಕಾರಿ ಸುಧನ್ವ ವಿ. ಕುಲಕರ್ಣಿ ಸೇರಿದಂತೆ ವಿಭಾಗಗಳ ಮುಖ್ಯಸ್ಥರು, ಉಪನ್ಯಾಸಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಗ್ರಾಮೀಣ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಪೂಲ್ ಕ್ಯಾಂಪಸ್ ಆಯೋಜಿಸಿರುವುದಕ್ಕೆ ಬಿ.ಎಲ್.ಡಿ.ಇ. ಸಂಸ್ಥೆಯ ಅಧ್ಯಕ್ಷ ಹಾಗೂ

ಸಚಿವ ಎಂ.ಬಿ. ಪಾಟೀಲ, ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯ ಸುನೀಲಗೌಡ ಪಾಟೀಲ ಮತ್ತು ಆಡಳಿತ ಮಂಡಳಿ ನಿರ್ದೇಶಕರು ಹರ್ಷ ವ್ಯಕ್ತಪಡಿಸಿ, ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ದೇವರಹಿಪ್ಪರಗಿ: ಗಮನ ಸೆಳೆದ ಯುವ ಸಂಸತ್ ಅಧಿವೇಶನ



ದೇವರಹಿಪ್ಪರಗಿ: ಪಟ್ಟಣದ ಸಿದ್ಧೇಶ್ವರ ಪ್ರೌಢಶಾಲೆಯ ಸಭಾಭವನದಲ್ಲಿ ತಾಲ್ಲೂಕು ಮಟ್ಟದ ಯುವ ಸಂಸತ್ ಅಧಿವೇಶನ 2026 ಕಾರ್ಯಕ್ರಮ ಶುಕ್ರವಾರ ನಡೆಯಿತು.


ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸಂಸತ್ ಕಲಾಪಗಳನ್ನು ಅನುಕರಿಸಲಾಯಿತು.

ವಿದ್ಯಾರ್ಥಿ ವಿದ್ಯಾರ್ಥಿನಿಯರು ಸಭಾಧ್ಯಕ್ಷರು, ಸಚಿವರು, ವಿರೋಧ ಪಕ್ಷದ ನಾಯಕರು ಹಾಗೂ ಸದಸ್ಯರಾಗಿ ಮಾತನಾಡಿದರು. ಎಲ್ಲರಿಗೂ ಮಾತನಾಡಲು ಮುಕ್ತ ಹಾಗೂ ಸೂಕ್ತ ಅವಕಾಶ ಕಲ್ಪಿಸುವ ಮೂಲಕ ಅಧಿವೇಶನ ಯಶಸ್ವಿಗೊಳಿಸಿದರು.

ಅಧಿವೇಶನದಲ್ಲಿ ನಿರುದ್ಯೋಗ ಸಮಸ್ಯೆ, ಬೆಂಗಳೂರು ನಗರ ಅಭಿವೃದ್ಧಿ, ಪ್ರಾಥಮಿಕ ಶಿಕ್ಷಣ ವ್ಯವಸ್ಥೆ, ಗ್ರಾಮೀಣ ಕುಡಿಯುವ ನೀರು ಪೂರೈಕೆ, ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಿತಿಗತಿ, ಜಲಜೀವನ ಯೋಜನೆ, ಕಾಲುವೆಗೆ ನೀರು ಪೂರೈಕೆ, ಬರಗಾಲಕ್ಕೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳು, ಸೈಬರ್ ಕ್ರೈಮ್, ರೈತರ ಸಾಲಮನ್ನಾದಂಥ ಪ್ರಚಲಿತ ವಿದ್ಯಮಾನಗಳ ಕುರಿತು ಚರ್ಚೆಗಳು ಗಮನ ಸೆಳೆದವು.

ತಹಶೀಲ್ದಾರ್ ನಿಂಗಪ್ಪ ಬಿರಾದಾರ, ಗ್ರೇಡ್–2 ತಹಶೀಲ್ದಾರ್ ಎಂ.ಜಿ.ಬಿರಾದಾರ, ಶಿರಸ್ತೇದಾರ ಸುರೇಶ ಮ್ಯಾಗೇರಿ, ತಾಲ್ಲೂಕು ಪಂಚಾಯಿತಿ ಇಒ ಭಾರತಿ ಚೆಲುವಯ್ಯ, ಬಿಇಒ ಟಿ.ಎಸ್.ಆಲಗೂರ, ಶಿಕ್ಷಣ ಸಂಯೋಜಕ ಎಸ್.ಎಮ್.ಕಪನಿಂಬರಗಿ, ಸಿಆರ್‌ಪಿ ವಿಜಯಲಕ್ಷ್ಮೀ ನವಲಿ, ಸಮಾಜ ಕಲ್ಯಾಣ ಇಲಾಖೆಯ ಭವಾನಿ ಪಾಟೀಲ, ಸಿದ್ಧೇಶ್ವರ ಸ್ವಾಮೀಜಿ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ವಿ.ಕೆ. ಪಾಟೀಲ, ಆಡಳಿತಾಧಿಕಾರಿ ಕೆ.ಪಿ.ಮಾಲಿಪಾಟೀಲ, ಶಿಕ್ಷಕ ಜಿ.ಪಿ. ಬಿರಾದಾರ ಇದ್ದರು.

ಸರ್ಕಾರಿ ಜಮೀನು, ಆಸ್ತಿಗಳ ಸಮಗ್ರ ಸರ್ವೇ ನಡೆಸಿ ಸಂರಕ್ಷಿಸಲು ಆಗ್ರಹ



ವಿಜಯಪುರ: ಜಿಲ್ಲೆಯ ಎಲ್ಲ ತಾಲೂಕುಗಳ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಮೀನು, ಆಸ್ತಿಗಳು ಹಾಗೂ ಖಾಲಿ ಜಾಗಗಳ ಸಮಗ್ರ ಹದ್ದುಬಸ್ತು ಸರ್ವೇ ನಡೆಸಿ, ತಂತಿಬೇಲಿ ಅಳವಡಿಸುವ ಮೂಲಕ ಜಿಲ್ಲಾಡಳಿತದ ಅಧೀನದಲ್ಲಿ ಸಂರಕ್ಷಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನಾ ಸಮಿತಿ ಆಗ್ರಹಿಸಿದೆ.

ಈ ಕುರಿತು ಸಮಿತಿಯ ಪದಾಧಿಕಾರಿಗಳು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು. ಬಬಲೇಶ್ವರ ತಾಲೂಕಿನ ಸಾರವಾಡ ಗ್ರಾಮದಲ್ಲಿ ಸುಮಾರು 165 ಎಕರೆ ಸರ್ಕಾರಿ ಜಮೀನು ಇದ್ದು, ಕೆಲ

ಹಿತಾಸಕ್ತಿಗಳು ಅಕ್ರಮವಾಗಿ ಕಬಳಿಸಲು ಮುಂದಾಗಿರುವುದರಿಂದ ಸರ್ಕಾರಕ್ಕೆ ನಷ್ಟವಾಗುತ್ತಿದೆ ಎಂದು ಆರೋಪಿಸಿದರು.

ಜಿಲ್ಲೆಯ ಪ್ರತಿಯೊಂದು ಗ್ರಾಮದಲ್ಲಿರುವ ಸರ್ಕಾರಿ ಜಮೀನು ಮತ್ತು ಆಸ್ತಿಗಳನ್ನು ಗುರುತಿಸಿ ಸರ್ವೇ ನಡೆಸುವುದರ ಜತೆಗೆ, ನಿವೇಶನ ರಹಿತ ಬಡವರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ,


ಹಿಂದುಳಿದ ವರ್ಗ ಹಾಗೂ ಇತರ ಅರ್ಹ ನಿರ್ಗತಿಕ ಕುಟುಂಬಗಳನ್ನು ಪಾರದರ್ಶಕವಾಗಿ ಗುರುತಿಸಿ ನಿವೇಶನ ಒದಗಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮೀಣ ಪ್ರದೇಶಗಳ ಅಗತ್ಯ–ಕ್ಕೆ ಅನುಗುಣವಾಗಿ ಸರ್ಕಾರಿ ಶಾಲಾ–ಕಾಲೇಜು, ಆಸ್ಪತ್ರೆ, ಆರೋಗ್ಯ ಕೇಂದ್ರ, ಇಲಾಖಾ ಕಚೇರಿ, ಅಂಗನವಾಡಿ, ಬಸ್ ನಿಲ್ದಾಣ, ಶೌಚಾಲಯ ಹಾಗೂ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಮನವಿಯನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಿಸಿದ ಇಲಾಖೆಗೆ ಸೂಕ್ತ ನಿರ್ದೇಶನ ನೀಡಿ ಶೀಘ್ರ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಸಾರ್ವಜನಿಕ ಹಿತದೃಷ್ಟಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಹೋರಾಟ ನಡೆಸಲಾಗುವುದು ಎಂದು ಸಮಿತಿ ಎಚ್ಚರಿಸಿದೆ.

ಈ ಸಂದರ್ಭದಲ್ಲಿ ರಾಜ್ಯಾಧ್ಯಕ್ಷ ಜಗದೇವ ಸೂರ್ಯವಂಶಿ, ಕರ್ನಾಟಕ ರಾಜ್ಯ ಕನ್ನಡಿಗರು ವೇದಿಕೆ ರಾಜ್ಯಾಧ್ಯಕ್ಷ ಲಕ್ಷ್ಮಣ ಕಂಬಾಗಿ, ಜಿಲ್ಲಾಧ್ಯಕ್ಷ ಗಿರೀಶ್ ಕಲಘಟಗಿ ಹಾಗೂ ವಾಲ್ಮೀಕಿ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಬಟಗಿ ಉಪಸ್ಥಿತರಿದ್ದರು.

ಅಕ್ರಮವಾಗಿ ಸಾಗಿಸುತ್ತಿದ್ದ 9 ಕ್ವಿಂಟಲ್ ಪಡಿತರ ಅಕ್ಕಿ ವಶ



ಬಸವನಬಾಗೇವಾಡಿ: ಅಕ್ರಮವಾಗಿ ಸಾಗಿಸುತ್ತಿದ್ದ 9 ಕ್ವಿಂಟಲ್ ಪಡಿತರ ಅಕ್ಕಿಯನ್ನು ತಾಲ್ಲೂಕು ಆಹಾರ ಇಲಾಖೆಯ ಅಧಿಕಾರಿಗಳು ಶುಕ್ರವಾರ ವಾಹನ ಸಮೇತ ವಶಪಡಿಸಿಕೊಂಡಿದ್ದಾರೆ.

ಶುಕ್ರವಾರ ಸಂಜೆ ಆಹಾರ ನಿರೀಕ್ಷಕಿ ರೆಹಾನಾ ಅಬ್ಬಾಸಲಿ ಖಾದಿಮ ಅವರಿಗೆ ದೊರೆತ ಮಾಹಿತಿಯ ಮೇರೆಗೆ ಪಟ್ಟಣದ ಮುತ್ತಗಿ ರಸ್ತೆಯ ಪವಾಡ ಬಸವೇಶ್ವರ (ಗವಿ) ದೇವಸ್ಥಾನದ ಬಳಿ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದರು. ಮುತ್ತಗಿ ಕಡೆಯಿಂದ ಬಸವನಬಾಗೇವಾಡಿ ಮಾರ್ಗವಾಗಿ ಇಂಗಳೇಶ್ವರಕ್ಕೆ ತೆರಳುತ್ತಿದ್ದ ಅರ್ಧ ನಂಬರ್ ಪ್ಲೇಟ್ ಅಳಿಸಲಾದ ಕಪ್ಪು–ಹಳದಿ ಬಣ್ಣದ ಟಂಟಂ ವಾಹನವನ್ನು ತಡೆದು ಪರಿಶೀಲಿಸಿದಾಗ, 9 ಕ್ವಿಂಟಲ್ ಪಡಿತರ ಅಕ್ಕಿ ಪತ್ತೆಯಾಗಿದೆ. ವಾಹನ ಚಾಲಕ ಇಂಗಳೇಶ್ವರದ ಶಿವಾನಂದ ಮೀಸಿ ಎಂಬಾತನನ್ನು ಪೊಲೀಸರ ವಶಕ್ಕೆ ಒಪ್ಪಿಸಲಾಗಿದ್ದು, ಬಸವನಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾರ್ಯಾಚರಣೆಯಲ್ಲಿ ಆಹಾರ ಶಿರಸ್ತೇದಾರ ಬಿ.ವಿ. ಅಗರಖೇಡ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

PUBLIC FAST KANNADA DAILY NEWS PAPER

ದಿನಾಂಕ : 14–10–2026

ಹೋಂಸ್ಟೇಗಳಿಗೆ ಅನುಮತಿ: ಕ್ರಮಕ್ಕೆ ಜಿಲ್ಲಾಧಿಕಾರಿ ಡಾ.ಸುರೇಶ ಸೂಚನೆ



ಕೊಪ್ಪಳ: ಪ್ರವಾಸೋದ್ಯಮ ಇಲಾಖೆಯ ನಿರ್ದೇಶನದಂತೆ ಹೋಂಸ್ಟೇಗಳ ನೋಂದಣಿ ಕಡ್ಡಾಯವಾಗಿದ್ದು, ಹೋಂಸ್ಟೇಗಳಿಗೆ ನಿಯಮಾನುಸಾರ ಅನುಮತಿ ನೀಡುವ ಮೂಲಕ ಜಿಲ್ಲೆಯ ಪ್ರವಾಸೋದ್ಯಮಕ್ಕೆ ಪ್ರೋತ್ಸಾಹ ನೀಡಬೇಕು ಎಂದು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಭೆಯಲ್ಲಿ ಮಾತನಾಡಿ 'ಜಿಲ್ಲೆಯ ಪ್ರಮುಖ ಪ್ರವಾಸಿ ಕೇಂದ್ರಗಳಲ್ಲಿರುವ ಹೋಂಸ್ಟೇಗಳ ನೋಂದಣಿ ಕಡ್ಡಾಯವಾಗಿದ್ದು, ನೋಂದಣಿಗಾಗಿ ಒಟ್ಟುಸ್ವೀಕೃತವಾದ39ಅರ್ಜಿಗಳಲ್ಲಿನಿಯಮಾನುಸಾರ ಹಾಗೂ ಮಾರ್ಗಸೂಚಿಯನ್ವಯ ದಾಖಲೆಗಳನ್ನು ಹೊಂದಿರುವ 11 ಹೋಂಸ್ಟೇಗಳಿಗೆ ಸಮಿತಿಯಿಂದ ಅನುಮೋದನೆ ಕೊಡಲಾಗಿದೆ. ಅಪೂರ್ಣ ದಾಖಲೆ ಹೊಂದಿರುವ ಹಾಗೂ ಬಾಕಿ ಇರುವ ಅರ್ಜಿಗಳನ್ನು ಪರಿಶೀಲಿಸಿ ಶೀಘ್ರವಾಗಿ ವಿಲೇವಾರಿ ಮಾಡಬೇಕು' ಎಂದರು.

ಪ್ರವಾಸೋದ್ಯಮ ಇಲಾಖೆಯಿಂದ ಜಿಲ್ಲೆಯಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಿ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಜಿಲ್ಲೆಯ ಅಶೋಕ ಶಾಸನ, ಪಾಲ್ಕಿಗುಂಡು ಶಾಸನ ಮತ್ತು ಕಿನ್ನಾಳ ಕಲೆಯನ್ನು ಅಭಿವೃದ್ಧಿಗೊಳಿಸಲು ಪ್ರಸ್ತಾವ ಸಲ್ಲಿಸಿಬೇಕು' ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಸಿಇಒ ವರ್ಣಿತ್ ನೇಗಿ ಅವರು ಮಾತನಾಡಿ 'ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳನ್ನು ಅಭಿವೃದ್ಧಿಗೊಳಿಸಿ, ಪಾರಂಪರಿಕ ಸ್ಥಳಗಳ ರಕ್ಷಣೆಗೆ ಅಗತ್ಯ ಕ್ರಮ ವಹಿಸಬೇಕು' ಎಂದು ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಸಹಾಯಕ ಆಯುಕ್ತ ಮಹಮ್ಮದ್ ಜೀಲಾನಿ, ಹಂಪಿ ಪಾರಂಪರಿಕ ಅಭಿವೃದ್ಧಿ ಕ್ಷೇತ್ರದ ಆಯುಕ್ತರಾದ ಬಾಲಕೃಷ್ಣ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ವಿಠ್ಠಲ ಜಾಬಗೌಡರ, ಉಪ ಅರಣ್ಯ ಸಂರಕ್ಷಣಾಧಿಕಾರಿ (ಸಾಮಾಜಿಕ ವಲಯ) ಹುಸೇನ್, ಗಂಗಾವತಿ ತಹಶೀಲ್ದಾರ್ ವಿನಾಯಕ ಗೋಡ್ಬೋಲೆ, ಕೊಪ್ಪಳ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಪಾಲ್ಗೊಂಡಿದ್ದರು.

ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸಿ: ಲೋಕಾಯುಕ್ತ ಡಿವೈಎಸ್‌ಪಿ ಸೂಚನೆ

ಯಲಬುರ್ಗಾ: ಗ್ರಾಮೀಣ ಪ್ರದೇಶದ ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸಲು, ವಿಶೇಷವಾಗಿ 7, 8 ಮತ್ತು 9ನೇ ತರಗತಿಗಳ ವಿದ್ಯಾರ್ಥಿಗಳ ಮೇಲೆ ಹೆಚ್ಚಿನ ಗಮನ ಹರಿಸಬೇಕು. ವಸತಿ ಶಾಲೆಗಳಲ್ಲಿ ಬಿಸಿನೀರು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರ ಹೇಳಿದರು.



ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಾರ್ವಜನಿಕರ ಕುಂದುಕೊರತೆಗಳ ಸಭೆಯಲ್ಲಿ ಅವರು ಮಾತನಾಡಿದರು.

ಬಿಸಿಯೂಟಕ್ಕೆ ಪೂರೈಸುವ ಆಹಾರ ಧಾನ್ಯಗಳ ಗುಣಮಟ್ಟ ಹಾಗೂ ವಸತಿ ನಿಲಯಗಳಲ್ಲಿ ತಯಾರಿಸುವ ಊಟದ ಬಗ್ಗೆ ದೂರುಗಳು ಬರುತ್ತಿವೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು. ಯಾವುದೇ ಸಂದರ್ಭದಲ್ಲಿ ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಆಹಾರದ ಗುಣಮಟ್ಟ ಪರಿಶೀಲಿಸಲಾಗುವುದು. ಮಕ್ಕಳ ಹಿತದೃಷ್ಟಿಯಿಂದ ನಿರ್ಲಕ್ಷ್ಯ ತೋರಬಾರದು ಎಂದು ಎಚ್ಚರಿಸಿದರು.

ತೋಟಗಾರಿಕೆ, ಕೃಷಿ ಸೇರಿದಂತೆ ವಿವಿಧ ಇಲಾಖೆಗಳ ಯೋಜನೆಗಳ ಫಲಾನುಭವಿಗಳ ಆಯ್ಕೆಯಲ್ಲಿ ಪ್ರತಿವರ್ಷ ಹಿಂದಿನವರನ್ನೇ ಪರಿಗಣಿಸಲಾಗುತ್ತಿದೆ ಎಂಬ ದೂರುಗಳಿವೆ. ಅರ್ಹ ಹೊಸ ಫಲಾನುಭವಿಗಳಿಗೂ ಅವಕಾಶ ಕಲ್ಪಿಸಬೇಕು ಎಂದರು.

ತಾಲ್ಲೂಕಿನ ಹಲವು ಇಲಾಖೆಗಳಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂದು ರೈತ ಸಂಘಟನೆಯಿಂದ ಸಲ್ಲಿಸಲಾದ ದೂರಿಗೆ ಪ್ರತಿಕ್ರಿಯಿಸಿದ ಅವರು, ನಿರ್ದಿಷ್ಟ ಇಲಾಖೆ, ಕಾಮಗಾರಿ ಹಾಗೂ ಸಂಬಂಧಿಸಿದ ಅಧಿಕಾರಿಯ ವಿವರಗಳೊಂದಿಗೆ ಲಿಖಿತ ದೂರು ನೀಡಬೇಕು. ಸಾಮಾನ್ಯ ಸ್ವರೂಪದ ದೂರಿನ ಆಧಾರದಲ್ಲಿ ಕ್ರಮ ಕೈಗೊಳ್ಳಲು ಸಾಧ್ಯವಿಲ್ಲ ಎಂದರು.

ಲೋಕಾಯುಕ್ತ ಸಿಪಿಐ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ನೀಲಗಂಗಾ ಬಬಲಾದ, ಸಹಾಯಕ ನಿರ್ದೇಶಕ ಹನಮಂತಗೌಡ ಪಾಟೀಲ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಮಕ್ಕಳು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಲಿ: ಟಿ.ಎಸ್.ಗೋವಿಂದರಾಜ

ಗಂಗಾವತಿ: 'ದೇಶದ ಅಭಿವೃದ್ಧಿಯಲ್ಲಿ ವಿಜ್ಞಾನದ ಪಾತ್ರ ಮಹತ್ವದ್ದು. ಮಕ್ಕಳು ಸ್ಪರ್ಧಾತ್ಮಕ ಜಗತ್ತಿನಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕಿದೆ' ಎಂದು ಇಸ್ರೋ ಹಿರಿಯ ವಿಜ್ಞಾನಿ ಟಿ.ಎಸ್. ಗೋವಿಂದರಾಜ ಹೇಳಿದರು.



ನಗರದ ಲಯನ್ಸ್ ಶಾಲಾ ಆವರಣದಲ್ಲಿ ಜರುಗಿದ 'ವಿಶ್ವ ಬಾಹ್ಯಾಕಾಶ ಸಪ್ತಾಹ 2026' ಕಾರ್ಯಕ್ರಮದಲ್ಲಿ ಮಾತನಾಡಿ, 'ಈಚೆಗೆ ಮಕ್ಕಳು ವೃತ್ತಿಪರ ಶಿಕ್ಷಣ ಪಡೆಯಲು ಹೆಚ್ಚಿನ ಆಸಕ್ತಿ ತೋರುತ್ತಿದ್ದಾರೆ ಹೊರತು ವಿಜ್ಞಾನಿಗಳಾಗಲು ಬಯಸುತ್ತಿಲ್ಲ. ವಿಜ್ಞಾನದ ಜ್ಞಾನ ವೃದ್ಧಿಗಾಗಿ ಇಸ್ರೋದಿಂದ ಅ.4 ರಿಂದ 10ರವರೆಗೆ 7ದಿನಗಳ ಕಾಲ ಪ್ರತಿ ವರ್ಷ ವಿಶ್ವ ಬಾಹ್ಯಕಾಶ ಸಪ್ತಾಹ ಆಚರಿಸುತ್ತಾ, ದೇಶಾದ್ಯಂತ ಆಯ್ದ ಶಾಲೆಗಳಲ್ಲಿ ಒಂದೊಂದು ದಿನ ಕಾರ್ಯಕ್ರಮ ನಡೆಸಲಾಗುತ್ತಿದೆ' ಎಂದು ತಿಳಿಸಿದರು.

ಲಯನ್ಸ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಜಿ.ಚಂದ್ರಪ್ಪ ಮಾತನಾಡಿ, 'ಜಿಲ್ಲೆಯ ಮಕ್ಕಳಿಗೆ ಬಾಹ್ಯಾಕಾಶದ ಬಗ್ಗೆ ಇರುವ ಕುತೂಹಲ, ಅದರಲ್ಲಿನ ಸಾಧನೆ, ಉಪಗ್ರಹ ಉಡಾವಣೆ ವಿಧಾನ ಇತರೆ ವಿಷಯಗಳ ಕುರಿತು ಸಮಗ್ರ ಮಾಹಿತಿ ಒದಗಿಸಲು 15 ವಿಜ್ಞಾನಿಗಳು ಇಸ್ರೋದಿಂದ ಆಗಮಿಸಿ, ಮಕ್ಕಳಿಗೆ ಪ್ರಾತ್ಯಕ್ಷಿಕೆ ಜತೆಗೆ ಸಂದೇಹಗಳಿಗೆ ಸ್ಪಂದಿಸಲಿದ್ದಾರೆ' ಎಂದು ಹೇಳಿದರು.

ಇದಕ್ಕೂ ಮುನ್ನ ಬಾಹ್ಯಾಕಾಶದ ಬಗೆಗಿನ ವಿಡಿಯೋ ಕ್ಲಿಪ್‌ಗಳ ಮೂಲಕ ಮಕ್ಕಳಿಗೆ ವಿವರಣೆ ನೀಡಲಾಯಿತು.

ಮಕ್ಕಳಿಗೆ ಉಪಗ್ರಹ ಉಡಾವಣೆ ಸೇರಿ ಇತರೆ ವಿಷಯಗಳ ಬಗ್ಗೆ ಕ್ವಿಜ್ ನಡೆಸಲಾಯಿತು.

ಕೊಪ್ಪಳ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಜಶೇಖರ ಪಾಟೀಲ, ಬಿಇಒ ಎಚ್.ಬಿ.ನಟೇಶ, ಪ್ರತಿಭಾ ಹೆಬ್ಬಾರ್, ಬೆಂಗಳೂರು ಇಸ್ರೋ ವಿಜ್ಞಾನಿ ಆರ್.ಬಾಲಾಜಿ, ಬಿ.ಕೋಮಲ, ಟಿ.ಎಂ. ಮೋಹನಕುಮಾರ,

ಹಾವನೂರು ಲಕ್ಷ್ಮಣ, ಜಂಬುನಾಥಗೌಡ, ಟಿ.ಕಂ.ದಾಸ್, ಡಿ.ಎಂ.ಅಭಿಷೇಕ, ಜಿ.ದೇವರಾಜ, ಶಂಕರಪಾಟೀಲ, ಎಂ.ಜಗನ್ನಾಥ ಭಾಗವಹಿಸಿದ್ದರು.

ಗಿಣಿಗೇರಿ ಬಾಲಕಿಯರ ಕಬಡ್ಡಿ ತಂಡ ವಿಭಾಗ ಮಟ್ಟಕ್ಕೆ ಆಯ್ಕೆ

ಕೊಪ್ಪಳ: ಇಲ್ಲಿನ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಕಬಡ್ಡಿ ಟೂರ್ನಿಯಲ್ಲಿ ತಾಲ್ಲೂಕಿನ ಗಿಣಿಗೇರಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದಿದ್ದು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಶಾಲಾ ಶಿಕ್ಷಣ ಇಲಾಖೆಯವರು ನಡೆಸಿದ ಜಿಲ್ಲಾಮಟ್ಟದ ಟೂರ್ನಿಯಲ್ಲಿ ಗಿಣಿಗೇರಿಶಾಲೆಯವಿದ್ಯಾರ್ಥಿಗಳು ಗಂಗಾವತಿ ತಾಲ್ಲೂಕಿನ



ಸಿದ್ದಾಪುರದ ಮೊರಾರ್ಜಿ ವಸತಿ ಶಾಲೆಯ ಬಾಲಕಿಯರ ಎದುರು ಗೆಲುವು ಸಾಧಿಸಿದರು. ಬಳ್ಳಾರಿಯಲ್ಲಿ ವಿಭಾಗ ಮಟ್ಟದ ಕ್ರೀಡಾಕೂಟ ನಡೆಯಲಿದೆ. ದೈಹಿಕ ಶಿಕ್ಷಣ ಶಿಕ್ಷಕ ಗದಿಗೆಪ್ಪ ಬಿಸರಳ್ಳಿ ಮಾರ್ಗದರ್ಶನ ಮಾಡಿದ್ದರು.

ಕನಕಗಿರಿ: ಮತದಾರರ ಪಟ್ಟಿ ಪರಿಷ್ಕರಣೆ ರದ್ದು ಪಡಿಸಲು ಆಗ್ರಹ

ಕನಕಗಿರಿ: 'ಪ್ರಜಾಪ್ರಭುತ್ವದಲ್ಲಿ ಜನರ ಅತ್ಯಂತ ಪವಿತ್ರವಾದ ಮತದಾನದ ಹಕ್ಕನ್ನು ಕಸಿದುಕೊಳ್ಳುತ್ತಿರುವ ಚುನಾವಣಾ ಆಯೋಗದ ದೋಷಪೂರಿತ ಮತದಾರರ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ತಕ್ಷಣವೇ ರದ್ದುಗೊಳಿಸಬೇಕು ಮತ್ತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು' ಎಂದು ಆಗ್ರಹಿಸಿ ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ (ಡಿವೈಎಫ್‌ಐ) ಹಾಗೂ ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ಸಂಘಟನೆಯ ಪದಾಧಿಕಾರಿಗಳು ಶುಕ್ರವಾರ ಇಲ್ಲಿ ಪ್ರತಿಭಟನೆ ನಡೆಸಿದರು.

ಡಿವೈಎಫ್‌ಐ ರಾಜ್ಯ ಸಹ ಕಾರ್ಯದರ್ಶಿ ಅಮರೇಶ ಕಡಗದ ಮಾತನಾಡಿ, 'ಚುನಾವಣಾ



ಆಯೋಗದ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಬಿಜೆಪಿಯ ಕೈಗೊಂಬೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ, ಒಂದು ಕಾಲದಲ್ಲಿ ಟಿ.ಎನ್. ಶೇಷನ್ ಅವರಂತಹ ದಿಟ್ಟ ಅಧಿಕಾರಿಗಳಿಂದ ಜಗತ್ತಿನಲ್ಲೇ ಅತ್ಯುನ್ನತ ಗೌರವ ಹೊಂದಿದ್ದ ಸ್ವತಂತ್ರ ಚುನಾವಣಾ ಆಯೋಗವು ಇಂದು ಪ್ರಜಾಪ್ರಭುತ್ವ ಮತ್ತು ಸಂವಿಧಾನ ವಿರೋಧಿಯಾಗಿ ಬದಲಾಗಿದೆ ಇದಕ್ಕೆ ಕಾರಣೀಕರ್ತ ಜ್ಞಾನೇಶ್‌ಕುಮಾರ್ ಅವರನ್ನು ವಜಾಗೊಳಿಸಬೇಕು' ಎಂದರು.

ಎಸ್‌ಎಫ್‌ಐ ಜಿಲ್ಲಾ ಅಧ್ಯಕ್ಷ ಶಿವಕುಮಾರ ಈಚನಾಳ ಮಾತನಾಡಿದರು. ಪ್ರಮುಖರಾದ ಸೈಯದ್ ಸುಭಾನ ಹುಲಿಹೈದರ, ತಿರುಪತಿ ಎಳ್ಳಬೆಂಚಿ, ತಿಮ್ಮಣ್ಣ, ಶರಣಪ್ಪ, ಯಮನೂರ, ಮೌನೇಶ ಇದ್ದರು.

ಇಂದಿರಾ ಕ್ಯಾಂಟೀನ್ ಮೆನು ಉಲ್ಲಂಘನೆ ! : ಗುತ್ತಿಗೆ ಸಂಸ್ಥೆಗೆ ನೋಟಿಸ್ : ಗರಿಷ್ಠ ದಂಡ ವಿಧಿಸಲು ಆಯುಕ್ತರ ಸೂಚನೆ



ಬೆಂಗಳೂರು : ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಆಯುಕ್ತ ಕೆ.ಎನ್.ರಮೇಶ್ ಪಟ್ಟಾಭಿನಗರ ವಾರ್ಡ್ ವ್ಯಾಪ್ತಿಯ ಜಯನಗರ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿರುವ ಇಂದಿರಾ ಕ್ಯಾಂಟೀನ್‌ಗೆ ಶನಿವಾರ ದಿಢೀರ್ ಭೇಟಿ ನೀಡಿ, ಆಹಾರದ ಗುಣಮಟ್ಟ, ಶುಚಿತ್ವ, ದಾಸ್ತಾನು ಹಾಗೂ ಸಾರ್ವಜನಿಕರಿಗೆ ವಿತರಿಸಲಾಗುತ್ತಿರುವ ಆಹಾರದ ವ್ಯವಸ್ಥೆಯನ್ನು ಪರಿಶೀಲನೆ ನಡೆಸಿದರು.

ಶನಿವಾರದ ನಿಗದಿತ ಮೆನುವಿನಂತೆ ಅನ್ನ, ಸಾಂಬಾರ್, ಪಲ್ಯ ಮತ್ತು ಖೀರು(ಪಾಯಸ)ವನ್ನು ಇಂದಿರಾ ಕ್ಯಾಂಟಿನ್‌ಗೆ ಪೂರೈಸಬೇಕಾಗಿದ್ದು, ಗುತ್ತಿಗೆ ಸಂಸ್ಥೆಯಿಂದ ಕೇವಲ ಬಿಸಿ ಬೇಳೆಬಾತ್ ಮಾತ್ರ ಪೂರೈಕೆಯಾಗಿದೆ. ಹಿಂದಿನ ನಾಲ್ಕೈದು ದಿನಗಳಿಂದಲೂ ಇದೇ ರೀತಿ ಮೆನು ಉಲ್ಲಂಘನೆಯಾಗಿರುವುದನ್ನು ಗಮನಿಸಿದ ಆಯುಕ್ತರು ಗುತ್ತಿಗೆ ಸಂಸ್ಥೆ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಈ ಇಂದಿರಾ ಕ್ಯಾಂಟೀನ್‌ಗೆ 'ರಿವಾರ್ಡ್ಸ್' ಸಂಸ್ಥೆಯಿಂದ ಆಹಾರಸರಬರಾಜುಮಾಡಲಾಗುತ್ತಿದ್ದು,ಈಸಂಸ್ಥೆಯು ನಿಗದಿತ ಮೆನು ಪ್ರಕಾರದಲ್ಲಿ ಆಹಾರ ಪೂರೈಸದೆ ನಿರ್ಲಕ್ಷ್ಯ ವಹಿಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿದ ಆಯುಕ್ತರು, ನಿಯಮ ಉಲ್ಲಂಘಿಸಿರುವ ಸಂಸ್ಥೆಗೆ ತಕ್ಷಣ ನೋಟಿಸ್ ಜಾರಿಗೊಳಿಸಿ ಗರಿಷ್ಠ ದಂಡ ವಿಧಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಇಂದಿರಾ ಕ್ಯಾಂಟೀನ್‌ಗೆ ಊಟಕ್ಕೆ ಬರುವ ಸಾರ್ವಜನಿಕರು ಆಹಾರದ ಗುಣಮಟ್ಟ ಮತ್ತು ಶುಚಿತ್ವದ ಕೊರತೆ ಕುರಿತು ದೂರುಗಳನ್ನು ಪುಸ್ತಕದಲ್ಲಿ ದಾಖಲಿಸಿರುವುದನ್ನು ಪರಿಶೀಲಿಸಿದ ಆಯುಕ್ತರು, ಆಹಾರದ ಗುಣಮಟ್ಟ ಕುರಿತು ದೂರುಗಳಿದ್ದರೂ ಮೇಲಧಿಕಾರಿಗಳಿಗೆ ಲಿಖಿತವಾಗಿ ವರದಿ ನೀಡಿ ಕ್ರಮ ಕೈಗೊಳ್ಳದೆ, ಕೇವಲ ಮೊಬೈಲ್ ಸಂದೇಶ ಕಳುಹಿಸಿದ್ದ ಕ್ಯಾಂಟೀನ್ ಮೇಲ್ವಿಚಾರಕರ ಬೇಜವಾಬ್ದಾರಿಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

ಅಲ್ಲದೆ, ಸಾರ್ವಜನಿಕರ ದೂರುಗಳ ಸಂಬಂಧ ಪಾಲಿಕೆಯ ಆರೋಗ್ಯಾಧಿಕಾರಿಗಳಿಗೆ ಸ್ಥಳದಲ್ಲೇ ದೂರವಾಣಿ ಕರೆ ಮಾಡಿ, ಸಂಬಂಧಪಟ್ಟವರ ವಿರುದ್ಧ ತಕ್ಷಣ ಕಠಿಣ ಕ್ರಮ ಕೈಗೊಳ್ಳುವಂತೆ ಆಯುಕ್ತರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಮುಂದುವರೆದು, ಬಡವರು ಹಾಗೂ ಆಸ್ಪತ್ರೆಯ ರೋಗಿಗಳ ಅನುಕೂಲಕ್ಕಾಗಿ ಪೌಷ್ಟಿಕ ಹಾಗೂ ಗುಣಮಟ್ಟದ ಆಹಾರ ನೀಡುವ ಸರಕಾರದ ಆಶಯಕ್ಕೆ ಯಾವುದೇ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಆಯುಕ್ತರು ಅಧಿಕಾರಿಗಳಿಗೆ ತಾಕೀತು ನೀಡಿ–ದರು. ಕ್ಯಾಂಟೀನ್ ಆವರಣದಲ್ಲಿ ಒಳಚರಂಡಿ ನೀರು ಉಕ್ಕಿ ಹರಿಯುತ್ತಿರುವುದನ್ನು ಗಮನಿಸಿದ ಆಯುಕ್ತರು, ಆಸ್ಪತ್ರೆಗೆ ಬರುವ ರೋಗಿಗಳು ಹಾಗೂ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಸಂಬಂಧಪಟ್ಟ ಎಂಜಿನಿಯರ್ ಗೆ ಕರೆ ಮಾಡಿ ಕೂಡಲೇ ಚರಂಡಿ ಸಮಸ್ಯೆ ಸರಿಪಡಿಸುವಂತೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಅಧಿಕಾರಿಗಳು, ಆರೋಗ್ಯ ವಿಭಾಗದ ಸಿಬ್ಬಂದಿ ಹಾಗೂ ಕ್ಯಾಂಟೀನ್ ಮೇಲ್ವಿಚಾರಕರು ಉಪಸ್ಥಿತರಿದ್ದರು.

18 ಲಕ್ಷ ರೂ. ಸಾಲಕ್ಕೆ ಪತಿಯ ಕೊಲೆ: ಪತ್ನಿ ಸೇರಿ ಮೂವರ ಬಂಧನ

ಗಂಗಾವತಿ: ತಾಲೂಕಿನ ಮುಸ್ಟೂರು ಕ್ಯಾಂಪಿನಲ್ಲಿ ವ್ಯಕ್ತಿಯೊಬ್ಬರನ್ನು ಕೊಲೆ ಮಾಡಿ ರಸ್ತೆ ಬದಿ ಎಸೆದಿದ್ದ ಪ್ರಕರಣವನ್ನು ಗಂಗಾವತಿ ಗ್ರಾಮೀಣ ಪೊಲೀಸರು 24 ಗಂಟೆಯೊಳಗೆ ಭೇದಿಸಿದ್ದಾರೆ. ಕೊಲೆಗೆ ಸಂಚು ರೂಪಿಸಿದ ಆರೋಪದ ಮೇಲೆ ಮೃತನ ಪತ್ನಿ ಸೇರಿದಂತೆ ಮೂವರನ್ನು ಬಂಧಿಸಿದ್ದಾರೆ.

ಮುಸ್ಟೂರು ಕ್ಯಾಂಪಿನ ರಾಘವೇಂದ್ರ ಹನುಮಂತಪ್ಪ ಸಾಳುಂಕೆ (38) ಕೊಲೆಯಾದವರು.

ಪತ್ನಿ ಉಮಾ ಸಾಳುಂಕೆ, ಗಂಗಾವತಿ ನಿವಾಸಿಗಳಾದ ಶಿವಾಜಿ ಮತ್ತು ಖಲೀಲ್ ಬಂಧಿತ ಆರೋಪಿಗಳು.

ಮನೆ ನಿರ್ಮಾಣಕ್ಕಾಗಿ ಮಾಡಿದ್ದ ಸುಮಾರು 18 ಲಕ್ಷ ಸಾಲ ತೀರಿಸಲಾಗದೆ ದಂಪತಿ ನಡುವೆ ಆಗಾಗ ಜಗಳ ನಡೆಯುತ್ತಿತ್ತು. ಈ ಹಿನ್ನೆಲೆಯಲ್ಲಿ ಪತಿಯನ್ನು ಕೊಲೆ ಮಾಡಿದರೆ ವಿಮೆ ಹಣ ದೊರೆಯುತ್ತದೆ ಎಂಬ ಸಲಹೆ ಉಮಾಗೆ ಸಿಕ್ಕಿತ್ತು ಎನ್ನಲಾಗಿದೆ. ಇದರಿಂದ ಪ್ರೇರಿತಳಾಗಿ ಕೊಲೆಗೆ ಸಂಚು ರೂಪಿಸಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ.



ಪೊಲೀಸರ ಪ್ರಕಾರ, ಉಮಾ ಸುಮಾರು ಒಂದು ವಾರ ಪತಿಯ ಊಟದಲ್ಲಿ ಮಾತ್ರೆ ಬೆರೆಸಿದ್ದಳು. ಬಳಿಕ ತನ್ನ ಸಂಬಂಧಿ ಶಿವಾಜಿಯನ್ನು ಸಂಪರ್ಕಿಸಿ, ಪತಿಯನ್ನು ಕೊಲೆ ಮಾಡಿದರೆ ಸಾಲದ ಹೊರೆ ಕಡಿಮೆಯಾಗುತ್ತದೆ ಎಂದು ಹೇಳಿ ಸ್ಕೂಟಿ ಕೊಡಿಸುವ ಆಮಿಷವೊಡ್ಡಿದ್ದಳು ಎನ್ನಲಾಗಿದೆ.

ಅಕ್ಟೋಬರ್ 7ರ ರಾತ್ರಿ ಶಿವಾಜಿ ತನ್ನ ಸ್ನೇಹಿತ ಖಲೀಲ್‌ನೊಂದಿಗೆ ಮುಸ್ಟೂರು ಕ್ಯಾಂಪ್‌ಗೆ ಬಂದಿದ್ದ.ಅಂದುರಾಘವೇಂದ್ರನಊಟದಲ್ಲಿ ಮಂಪರು ಮಾತ್ರೆ ಬೆರೆಸಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಮಧ್ಯರಾತ್ರಿ 12ರ ಸುಮಾರಿಗೆ ಉಮಾ ಮತ್ತು ಶಿವಾಜಿ ಶಾಲಿನಿಂದ ರಾಘವೇಂದ್ರನ ಕತ್ತು ಬಿಗಿದು, ಬಡಿಗೆಯಿಂದ ತಲೆಗೆ ಹೊಡೆದಿದ್ದಾರೆ ಎನ್ನಲಾಗಿದೆ.

ಈ ವೇಳೆ ಎಚ್ಚರಗೊಂಡ ಮಕ್ಕಳನ್ನು ಉಮಾ ಗದರಿಸಿ ಮಲಗಿಸಿದ್ದಳು ಎಂದು ಪೊಲೀಸರು ಹೇಳಿದ್ದಾರೆ.

ಬಳಿಕ ರಾಘವೇಂದ್ರನನ್ನು ಗ್ರಾಮದಿಂದ ಸುಮಾರು ಐದು ಕಿ.ಮೀ. ದೂರದ ರಸ್ತೆ ಬದಿ ಕೊಂಡೊಯ್ದು ಎಸೆದಿದ್ದರು. ಆತ ಜೀವಂತವಾಗಿರುವುದನ್ನು ಗಮನಿಸಿ ಕ್ರಿಮಿನಾಶಕ ಔಷಧ ಕುಡಿಸಿದ್ದಾರೆ ಎಂದು ಪೊಲೀಸರುತಿಳಿಸಿದ್ದಾರೆ.ಅಪರಿಚಿತವಾಹನ ಢಿಕ್ಕಿಯಿಂದ ಸಾವು ಸಂಭವಿಸಿದೆ ಎಂದು ಬಿಂಬಿಸುವ ಉದ್ದೇಶ ಆರೋಪಿಗಳಿಗಿತ್ತು ಎನ್ನಲಾಗಿದೆ.

ಅಕ್ಟೋಬರ್ 8ರ ಬೆಳಿಗ್ಗೆ ಹೊಲಗಳಿಗೆ ತೆರಳುತ್ತಿದ್ದ ರೈತರು ರಸ್ತೆ ಬದಿ ರಾಘವೇಂದ್ರ ಬಿದ್ದಿರುವುದನ್ನು ಗಮನಿಸಿ ಉಮಾಗೆ ಮಾಹಿತಿನೀಡಿದ್ದರು.ಪತಿಗೆಫಿಟ್ಸ್‌ಬಂದಿದ್ದು, ಅಪರಿಚಿತ ವಾಹನ ಢಿಕ್ಕಿ ಹೊಡೆದಿರಬಹುದು ಎಂದು ಆಕೆ ತಿಳಿಸಿದ್ದಳು ಎನ್ನಲಾಗಿದೆ.

ಪ್ರಕರಣದತನಿಖೆಆರಂಭಿಸಿದಪೊಲೀಸರಿಗೆ ಉಮಾಳ ವರ್ತನೆಯ ಬಗ್ಗೆ ಅನುಮಾನ ಮೂಡಿತ್ತು. ಬಳಿಕ ವಿಚಾರಣೆ ನಡೆಸಿ, ಇತರ ಆರೋಪಿಗಳ ಸಂಪರ್ಕ ಹಾಗೂ ಘಟನೆಯ ವಿವರಗಳನ್ನು ಪರಿಶೀಲಿಸಿದಾಗ ಕೊಲೆಯ ಹಿಂದಿನ ಸಂಚು ಬೆಳಕಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಶಾರ್ಟ್ ಸರ್ಕಿಟ್‌ನಿಂದ ಬೆಂಕಿ, 4 ಎಕರೆ ಕಬ್ಬು ನಾಶ

ಕುಕನೂರು: ತಾಲ್ಲೂಕಿನ ಚನ್ನಪ್ಪನಹಳ್ಳಿ ಗ್ರಾಮದ ಗಿರೀಶ್ ಮಾಧವರಾವ್ ದೇಸಾಯಿ ಎಂಬ ರೈತರ ಕಬ್ಬಿನ ಗದ್ದೆಗೆ ವಿದ್ಯುತ್ ಶಾರ್ಟ್ ಸರ್ಕಿಟ್‌ನಿಂದ ಬೆಂಕಿ ಹೊತ್ತಿಕೊಂಡು 4 ಎಕರೆಗೂ ಅಧಿಕ ಕಬ್ಬು ಸುಟ್ಟುಹೋಗಿರುವ ಘಟನೆ ಗುರುವಾರ ನಡೆದಿದೆ.

8 ಎಕರೆ ಜಮೀನಿನಲ್ಲಿ ಕಬ್ಬು ಬೆಳೆಯಲಾಗಿತ್ತು. ಕಬ್ಬಿನ ಗದ್ದೆಯಲ್ಲಿದ್ದ ವಿದ್ಯುತ್ ಮೋಟಾರ್‌ನಲ್ಲಿ ಶಾರ್ಟ್ ಸರ್ಕಿಟ್



ಉಂಟಾಗಿ ಬೆಂಕಿ ಕಾಣಿಸಿಕೊಂಡ ಕೆಲವೇ ಕ್ಷಣಗಳಲ್ಲಿ ಬೆಂಕಿ ಕಬ್ಬಿನ ಗದ್ದೆಗೆ ವ್ಯಾಪಿಸಿದೆ. ಅಗ್ನಿಶಾಮಕ ವಾಹನ ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸುವ ಕಾರ್ಯ ಕೈಗೊಂಡರೂ, ಅಷ್ಟರಲ್ಲಿ 4 ಎಕರೆಗೂ ಅಧಿಕ ಕಬ್ಬಿನ ಬೆಳೆ ಬೆಂಕಿಗೆ ಆಹುತಿಯಾಗಿತ್ತು.


ಘಟನಾ ಸ್ಥಳಕ್ಕೆ ಭೇಟಿ ನೀಡಿದ ಆರ್‌ಐ ರಂಗನಾಥ್ ಹಾಗೂ ಮಹಮ್ಮದ್ ವಾಲಿಕಾರ್ ಅವರು ಸ್ಥಳ ಪರಿಶೀಲನೆ ನಡೆಸಿ ಪಂಚನಾಮ ಕೈಗೊಂಡು ವರದಿಯನ್ನ ಮೇಲಧಿಕಾರಿಗಳಿಗೆ ಸಲ್ಲಿಸುವುದಾಗಿ ರೈತ ಗಿರೀಶ್ ದೇಸಾಯಿ ಅವರಿಗೆ ತಿಳಿಸಿದ್ದಾರೆ.

ಎಸ್‌ಐಆರ್ ನೆಪದಲ್ಲಿ ವೃದ್ಧೆಯ ಮನೆಗೆ ನುಗ್ಗಿ ಚಿನ್ನದ ಸರ ಕದ್ದ ಇಬ್ಬರ ಬಂಧನ

ಉಡುಪಿ: ಒಂಟಿಯಾಗಿ ವಾಸಿಸುತ್ತಿದ್ದ 74 ವರ್ಷದ ವೃದ್ಧೆಯ ಮನೆಗೆ ನುಗ್ಗಿ ಚಿನ್ನದ ಸರ ಕಳ್ಳತನ ಮಾಡಿದ ಆರೋಪದ ಮೇಲೆ ಇಬ್ಬರನ್ನು ಉಡುಪಿ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಆರೋಪಿಗಳಿಂದ 5.53 ಲಕ್ಷ ರೂ. ಮೌಲ್ಯದ ಚಿನ್ನದ ಸರ, ಸ್ಕೂಟರ್ ಹಾಗೂ ಎರಡು ಮೊಬೈಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಅಕ್ಟೋಬರ್? 7ರಂದು ಸಂಜೆ ಮತದಾರರ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ (SIR) ಕುರಿತು ಮಾಹಿತಿ ಕೇಳುವ ನೆಪದಲ್ಲಿ ಇಬ್ಬರು ಅಪರಿಚಿತರು ನಿಟ್ಟೂರಿನ ಶಾಂತಾ ಕಾರಂತ್ (74) ಅವರ ಮನೆಗೆ ಬಂದಿದ್ದರು. ಈ ವೇಳೆ ವೃದ್ಧೆಯನ್ನು ಕೆಳಕ್ಕೆ ದೂಡಿ, ಅವರ ಕುತ್ತಿಗೆಯಲ್ಲಿದ್ದ ಸುಮಾರು 30 ಗ್ರಾಂ ತೂಕದ ಚಿನ್ನದ ಸರವನ್ನು ಬಲವಂತವಾಗಿ ಕಿತ್ತುಕೊಂಡು ಪರಾರಿಯಾಗಿದ್ದರು. ಈ ಬಗ್ಗೆ ಉಡುಪಿ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ತನಿಖೆ ನಡೆಸಿದ ಪೊಲೀಸರು ಅಕ್ಟೋಬರ್ 10ರಂದು ಮಣಿಪಾಲದ ಮಣ್ಣಪಳ್ಳದಲ್ಲಿ ವಾದಿರಾಜ್ ಗಾಣಿಗ



(44) ಮತ್ತು ಸಚಿನ್ (30) ಎಂಬವರನ್ನು ಬಂಧಿಸಿದ್ದಾರೆ. ವಿಚಾರಣೆ ವೇಳೆ ಕಳ್ಳತನ ಮಾಡಿದ ಚಿನ್ನದ ಸರವನ್ನು ಮಣಿಪಾಲದ ಇಂಡಸ್ಟ್ರಿಯಲ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯಲ್ಲಿ ಅಡವಿಟ್ಟಿರುವುದಾಗಿ ಆರೋಪಿಗಳು ತಿಳಿಸಿದ್ದಾರೆ.

ಬಳಿಕ 34 ಗ್ರಾಂ ತೂಕದ ಚಿನ್ನದ ಸರ (4.50 ಲಕ್ಷ ರೂ. ಮೌಲ್ಯ), ಕೃತ್ಯಕ್ಕೆ ಬಳಸಿದ ಓಲಾ ಎಲೆಕ್ಟ್ರಿಕ್ ಸ್ಕೂಟರ್ (90 ಸಾವಿರ ರೂ. ಮೌಲ್ಯ) ಹಾಗೂ ಎರಡು ಮೊಬೈಲ್‌ಗಳನ್ನು (13 ಸಾವಿರ ರೂ. ಮೌಲ್ಯ) ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ಸಾಲ ತೀರಿಸುವ ಮತ್ತು ಐಷಾರಾಮಿ ಜೀವನ ನಡೆಸುವ ಉದ್ದೇಶದಿಂದ ಕೃತ್ಯ ಎಸಗಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಮೊದಲ ಆರೋಪಿ ವೃದ್ಧೆಯ ನೆರೆಮನೆಯವನಾಗಿದ್ದಾನೆ. ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, 14 ದಿನಗಳ ನ್ಯಾಯಾಂಗ ಬಂಧನ ವಿಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಉಡುಪಿ ಜಿಲ್ಲಾ ಪೊಲೀಸ್ ಅಧೀಕ್ಷಕ ಹರಿರಾಮ್ ಶಂಕರ್ ಅವರ ನಿರ್ದೇಶನದಲ್ಲಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಸುಧಾಕರ್ ನಾಯ್ಕ್ ಹಾಗೂ ಡಿವೈಎಸ್ಪಿ ಬೆಳ್ಳಿಯಪ್ಪ ಅವರ ಮಾರ್ಗದರ್ಶನದಲ್ಲಿ ಪೊಲೀಸ್ ನಿರೀಕ್ಷಕ ಮಹೇಶ್ ಪ್ರಸಾದ್ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿದೆ.

ರಾಣೆಬೆನ್ನೂರು ಬಳಿ ಲಾರಿ ಹರಿದು ಯುವ ರೈತ ಸ್ಥಳದಲ್ಲೇ ಸಾವು

ರಾಣೆಬೆನ್ನೂರು: ಕಟಾವು ಮಾಡಿದ ಮೆಕ್ಕೆಜೋಳವನ್ನು ರಾಷ್ಟ್ರೀಯ ಹೆದ್ದಾರಿ–48ರ ಬಳಿಯ ಸರ್ವೀಸ್ ರಸ್ತೆಯಲ್ಲಿ ಒಣಗಿಸಲು ಹಾಕಿ, ಅದರ ರಾಶಿ ಕಾಯುತ್ತ ರಸ್ತೆಯ ಬದಿಯಲ್ಲಿ ಮಲಗಿದ್ದ ಯುವ ರೈತನ ಮೇಲೆ ಕ್ಯಾಂಟರ್ ಲಾರಿ ಹರಿದು ಸ್ಥಳದಲ್ಲೇ ಮೃತಪಟ್ಟ ಘಟನೆ ತಾಲ್ಲೂಕಿನ ಕಮದೋಡ ಗ್ರಾಮದ ಬಳಿ ಬುಧವಾರ ತಡರಾತ್ರಿ ನಡೆದಿದೆ.



ಕಮದೋಡ ಗ್ರಾಮದ ಚಂದ್ರಪ್ಪ ಬಸಪ್ಪ ಬಿಳಸನೂರು (37) ಮೃತಪಟ್ಟ ರೈತ. ಅಪಘಾತ ಘಟನೆಯಲ್ಲಿ ಅವರು ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಚಂದ್ರಪ್ಪ ಮೃತಪಟ್ಟಿರುವುದು ಬೆಳಗಿನ ಜಾವ ಕಂಡುಬಂದಿದೆ.

ಈ ಕುರಿತು ಮೃತರ ಅಣ್ಣನ ಮಗ ಚಂದ್ರು ಸಾತೇನಹಳ್ಳಿ ನೀಡಿದ ದೂರಿನ ಆಧಾರದ ಮೇಲೆ ಹಲಗೇರಿ ಗ್ರಾಮೀಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರು ಘಟನೆಯ ಕುರಿತು ತನಿಖೆ ಕೈಗೊಂಡಿದ್ದಾರೆ. ಮೃತ ಚಂದ್ರಪ್ಪ ಅವರಿಗೆ ತಂದೆ, ಇಬ್ಬರು ಪುತ್ರಿಯರು ಹಾಗೂ ಪುತ್ರ ಇದ್ದಾರೆ.

PUBLIC FAST KANNADA DAILY NEWS PAPER

ದಿನಾಂಕ : 14-10-2026

ವಿಜ್ಞಾನ ಆವಿಷ್ಕಾರ ವಿದ್ಯಾರ್ಥಿಗಳಿಗೆ ಸತ್ಕಾರ

ಚಿಕ್ಕೋಡಿ: ವಿದ್ಯಾರ್ಥಿಗಳು ವಿಜ್ಞಾನ ವಿಷಯದಲ್ಲಿ ಆವಿಷ್ಕಾರ ಮಾಡುವಲ್ಲಿ ಮುಂದೆ ಇರಬೇಕು.

ಸಣ್ಣ ಸಣ್ಣ ಸಾಧನೆಯೇ ದೊಡ್ಡ ಮೇರು ಪರ್ವತವಾಗುತ್ತದೆ. ಮುಂದೊಂದು ದಿನ ದೊಡ್ಡ ವಿಜ್ಞಾನಿಯಾಗಲು ವಿದ್ಯಾರ್ಥಿ ಜೀವನದಲ್ಲಿರುವ ಆಸಕ್ತಿಯೇ ಅಡಿಪಾಯವಾಗುತ್ತದೆ ಎಂದು ಡಿಡಿಪಿಐ ಅಜೀತ ಮನ್ನಿಕೇರಿ ಹೇಳಿದರು.

ಪಟ್ಟಣದ ಡಯಟ್ ಸಭಾಭವನದಲ್ಲಿ ಚಿಕ್ಕೋಡಿ ಶೈಕ್ಷಣಿಕ ಜಿಲ್ಲಾ ವ್ಯಾಪ್ತಿಯಲ್ಲಿನ ಶಿಕ್ಷಣ ಇಲಾಖೆಯ ಅಧಿಕಾರಿ ಹಾಗೂ ಸಿಆರ್‌ಪಿಗಳಿಗೆಮಂಗಳವಾರಹಮ್ಮಿಕೊಂಡ ಒಂದು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಪ್ರಾಚಾರ್ಯ ಜೆ.ಪಿ.ತಂಗಡಿ ಮಾತನಾಡಿದರು. ದೆಹಲಿಯಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ವಿಜ್ಞಾನ ಅವಿಷ್ಕಾರಪ್ರತಿಭಾಪ್ರದರ್ಶನಕಾರ್ಯಕ್ರಮಕ್ಕೆ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಿಂದ ಆಯ್ಕೆಯಾದ ರಾಕೇಶ ಖೋತ (ಸರ್ಕಾರಿ ಪ್ರೌಢಶಾಲೆ, ದಂಡಾಪೂರ), ಸಚಿನ ಸು- ಣಗಾರ (ಸರ್ಕಾರಿ ಪ್ರೌಢಶಾಲೆ, ಹುಣಶ್ಯಾಳ ಪಿಜಿ), ಸುಪ್ರೀತ ಕೋಳೇಕರ (ಜಿಎನ್‌ಎಸ್ ಪಿಯು ಕಾಲೇಜು, ಯಾದವಾಡ), ಸ್ಫೂರ್ತಿ ನಾಯಿಕ (ಖೇಮಲಾಪೂರೆ ಸೆಂಟ್ರಲ್ ಸ್ಕೂಲ್, ಬೆಲ್ಲದ ಬಾಗೇವಾಡಿ), ದೀಪಾ ದಿವಟೆ (ಸರ್ಕಾರಿ ಪ್ರೌಢಾಲೆ, ಉಮರಾಣಿ), ಶ್ರೇಯಾ ಬಾಳಿಕಟ್ಟಿ (ಸರ್ಕಾರಿ ಪ್ರೌಢಶಾಲೆ, ಮದವಾಲ) ಅವರನ್ನು ಸತ್ಕರಿಸಲಾಯಿತು.

ಚಿಕ್ಕೋಡಿ ಡಯಟ್ ಪ್ರಾಚಾರ್ಯ ಜೆ.ಪಿ.ತಂಗಡಿ, ಅಕ್ಷರ ದಾಸೋಹದ ಜಿಲ್ಲಾ ಮಟ್ಟದ ಅಧಿಕಾರಿ ರಾಜೇಂದ್ರ ತೇರದಾಳ, ಚಿಕ್ಕೋಡಿಯ ಉಪ ಯೋಜನಾ ಸಮನ್ವಯಾಧಿಕಾರಿ ಆರ್. ಎಂ.ಮಠದ, ಡಯಟ್ ಉಪನ್ಯಾಸಕ ಎಂ.ಎಚ್. ಯರಗುದ್ರಿ, ಸಂಜೀವ ಹುಲ್ಲೋಳಿ, ಕುಮಾರ ಮಾದರ, ಕೆ ಟಿ ಕಾಂಬಳೆ, ಕೆ ಬಿ ತಳವಾರ ಹಾಜರಿದ್ದರು.

ಸವದತ್ತಿ: ಕಬ್ಬು ಕಾರ್ಖಾನೆ ಆರಂಭಿಸದಿರಲು ಆಗ್ರಹ

ಸವದತ್ತಿ: ರೈತರು ಬೆಳೆದ ಕಬ್ಬಿಗೆ ಸರ್ಕಾರಗಳು ಸೂಕ್ತ ಬೆಂಬಲ ಬೆಲೆ ನಿಗದಿಪಡಿಸುವವರೆಗೆ ಸಕ್ಕರೆ ಕಾರ್ಖಾನೆಗಳನ್ನು ಆರಂಭಿಸಬಾರದು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮತ್ತು ಭಾರತೀಯ ಕೃಷಿಕ ಸಮಾಜದ ಪದಾಧಿಕಾರಿಗಳು ಶುಕ್ರವಾರ ಇಲ್ಲಿನ ಹರ್ಷಾ ಶುಗರ್ಸ್ ಕಬ್ಬು ವಿಭಾಗದ ಅಧಿಕಾರಿ ಎಸ್.ಬಿ. ಪಾಟೀಲ ಅವರಿಗೆ ಮನವಿ ಸಲ್ಲಿಸಿದರು.

ರೈತ ಮುಖಂಡ ಶಿವಾನಂದ ಸರದಾರ ಮಾತನಾಡಿ, ರಾಜ್ಯ ಸರ್ಕಾರ ಹಲವು ವರ್ಷಗಳಿಂದ ಕಬ್ಬಿಗೆ ಸೂಕ್ತ ಬೆಂಬಲ ಬೆಲೆ ನೀಡಿಲ್ಲ. ರಾಜಕೀಯ ಹಿತಾಸಕ್ತಿಗಳನ್ನು ಬದಿಗಿಟ್ಟು ರೈತರ ಹಿತ ಕಾಯಲು ಕಾರ್ಖಾನೆಗಳು ಸಹಕರಿಸಬೇಕು.



ಸೂಕ್ತ ಬೆಲೆ ನಿಗದಿಪಡಿಸಿದರೆ ರೈತರಿಗೆ ಪ್ರತಿ ಟನ್ ಕಬ್ಬಿಗೆ ಹೆಚ್ಚುವರಿಯಾಗಿ 500 ರಿಂದ 800ರವರೆಗೆ ದೊರೆಯಲಿದೆ ಎಂದರು.

ರೈತ ಮುಖಂಡ ಸುರೇಶ ಸಂಪಗಾವಿ ಮಾತನಾಡಿ, ರೈತರ ಮನವಿ ಹಾಗೂ ಬೇಡಿಕೆಗಳನ್ನು ಕಡೆಗಣಿಸಿ ಕಾರ್ಖಾನೆ ಆರಂಭಿಸಿದರೆ, ಅದರಿಂದ ಉಂಟಾಗುವ ಅಹಿತಕರ ಘಟನೆಗಳಿಗೆ ಕಾರ್ಖಾನೆಗಳೇ ಹೊಣೆ ಹೊರಬೇಕಾಗುತ್ತದೆ ಎಂದು ಎಚ್ಚರಿಸಿದರು.

ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ ಬಸವರಾಜ ಬಿಜ್ಜೂರ ಮಾತನಾಡಿ, ಅ.20ರಿಂದ ಕಾರ್ಖಾನೆಗಳನ್ನು ಆರಂಭಿಸಲು ಕೇಂದ್ರ ಸರ್ಕಾರ ಆದೇಶಿಸಿರುವ ಮಾಹಿತಿ ಇದೆ.

ತಮಿಳುನಾಡಿನಲ್ಲಿ ಈಗಾಗಲೇ ಎಂಎಸ್‌ಪಿ ಜಾರಿಯಾಗಿದೆ.

ರೈತರ ಬೇಡಿಕೆಯಂತೆ ಬೆಲೆ ನಿಗದಿಪಡಿಸಿದ ಬಳಿಕವೇ ಕಾರ್ಖಾನೆ ಆರಂಭಿಸಬೇಕು ಎಂದರು.

ಭಾರತೀಯ ಕೃಷಿಕ ಸಮಾಜದ ರಾಜ್ಯಾಧ್ಯಕ್ಷ ಮಹಾಂತೇಶ ಕಮತ, ಬಸವರಾಜ ಬಿಜ್ಜೂರ, ಸುರೇಶ ಸಂಪಗಾವಿ, ಚಿದು ಪಾಟೀಲ, ಅಮರ ಕುಲಕರ್ಣಿ, ಸುರೇಶ ಅಂಗಡಿ, ಮಹಾಂತೇಶ ಮುತವಾಡ, ಅಲ್ಲಿಸಾಬ ನೂಲಗಿ, ಶಾಹು ಮುರಗೋಡ ಹಾಜರಿದ್ದರು.

ಮದ್ಯ ಮುಕ್ತ ಸಮಾಜ ನಿರ್ಮಿಸಿ: ಸರ್ವೋತ್ತಮ ಜಾರಕಿಹೊಳಿ

ಮೂಡಲಗಿ: 'ಜೀವನ ಕಳೆದುಕೊಳ್ಳುವ ಅಂಚಿನಲ್ಲಿರುವ ಅನೇಕ ಮದ್ಯವ್ಯಸನಿಗಳಿಗೆ ಮದ್ಯವರ್ಜನೆ ಶಿಬಿರಗಳಿಂದ ನವಜೀವನ ಸಿಗಲಿದೆ ಎಂದು ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿ ಹೇಳಿದರು.

ಈರಣ್ಣ ದೇವಸ್ಥಾನದ ಕೆ.ಎಚ್. ಸೋನವಾಲಕರ ಕಲ್ಯಾಣ ಮಂಟಪದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಡಿಯಲ್ಲಿ ಶುಕ್ರವಾರ ಏರ್ಪಡಿಸಿದ್ದ ನವಜೀವನ ಸದಸ್ಯರ ಸಮಾವೇಶ ಮತ್ತು ಗಾಂಧಿ ಸ್ಮೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಗ್ರಾಮಾಭಿವೃದ್ಧಿ ಯೋಜನೆಯ ಶಿಕ್ಷಣ ಪ್ರಸಾರಕ ದಿನೇಶ ಪೂಜಾರ,

ಕರ್ನಾಟಕ ಉಪ್ಪಾರ ಅಭಿವೃದ್ಧಿ ಸಂಘದ ಅಧ್ಯಕ್ಷ ಭರಮಣ್ಣ ಉಪ್ಪಾರ, ಅಥಣಿ ಜನಜಾಗೃತಿ ವೇದಿಕೆ ಅಧ್ಯಕ್ಷ ಅಮರ



ದುರ್ಗಣ್ಣವರ, ಮುನ್ಯಾಳದ ಆನಂದರಾವ ನಾಯ್ಕ, ಬಸವರಾಜ ಮಾತನಾಡಿದರು.

ಸುಣಧೋಳಿಯ ಶಿವಾನಂದ ಸ್ವಾಮೀಜಿ, ಮುನ್ಯಾಳ ರಂಗಾಪೂರದ ಶಿವಲಿಂಗ ಮುರಘರಾಜೇಂದ್ರ ಸ್ವಾಮೀಜಿ, ಅಭಿನವ ಧರೇಶ್ವರ ಸ್ವಾಮೀಜಿ ಹಾಗೂ ನಾಗನೂರದ ಕಾವ್ಯಶ್ರೀ ಅಮ್ಮನವರು ಮಾತನಾಡಿದರು.

ಮದ್ಯವರ್ಜನ ಶಿಬಿರದ ಮೂಲಕ ಮದ್ಯ ವ್ಯಸನದಿಂದ ಮುಕ್ತಗೊಂಡಿರುವ 300 ಜನರಿಗೆ ಗಾಂಧಿ ಬಿಳಿ ಟೊಪ್ಪಿಗೆ ಹಾಗೂ ಬಿಳಿ ಶಾಲು ಹಾಕಿ ಸನ್ಮಾನಿಸಿದರು.

ಮದ್ಯ ವ್ಯಸನದಿಂದ ಮುಕ್ತರಾಗಿರುವ ನಾಗನೂರದ ವಿನಾಯಕ ಗೋಟೂರ ತಮ್ಮ ಅನುಭವ ಹಂಚಿಕೊಂಡರು.

ಅಥಣಿ ಜನಜಾಗೃತಿ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಸಂಜಯ ನಾಡಗೌಡ, ವರ್ಧಮಾನ ಬೋಳಿ, ದಯಾಶೀಲ, ಪರಸಪ್ಪ ಬಬಲಿ, ರಮೇಶ ಸಣ್ಣಕ್ಕಿ, ಮರೆಪ್ಪ ಮರೆಪ್ಪಗೋಳ, ಕೆ.ಬಿ. ಪಾಟೀಲ, ಅನ್ವರ ನದಾಫ,

ಅಣ್ಣಪ್ಪ ಅಕ್ಕನ್ನವರ, ಬೈರಪ್ಪ ಯಕ್ಕುಂಡಿ, ಜಿಲ್ಲಾ ನಿರ್ದೇಶಕಿ ಲೀಲಾವತಿ, ಹರೀಶಗೌಡ ಇದ್ದರು. ಭಾಸ್ಕರ್ ಎನ್. ನಿರೂಪಿಸಿದರು.

ಪತ್ರಕರ್ತರು ಸಮಾಜದ ನೋವುಗಳಿಗೆ ಸ್ಪಂದಿಸಬೇಕು: ಮಲ್ಲಿಕಾರ್ಜುನ ಹೆಗ್ಗಳಗಿ

ಮಹಾಲಿಂಗಪುರ : ಸಮಾಜದಲ್ಲಿಯ ಜನರಿಗೆ ಆಗುವ ನೋವು-ಅವಮಾನಗಳಿಗೆ ಸ್ಪಂದಿಸುವ ಗುಣ ಪತ್ರಕರ್ತನಿಗೆ ಇರಬೇಕು. ಉತ್ಪಾದನಾ ಬೆಲೆಗಿಂತ ಅಂದರೆ ಒಂದು ಪತ್ರಿಕೆ ಸಿದ್ಧವಾಗಲು 22 ರೂ. ಖರ್ಚಾಗುತ್ತದೆ. ಅದನ್ನು ಗ್ರಾಹಕನಿಗೆ ಕೇವಲ ಐದಾರು ರೂ. ಗೆ ಇಡೀ ತಿಂಗಳು ಉದ್ರಿ ಕೊಡುವ ಏಕೈಕ ಕ್ಷೇತ್ರ ಪತ್ರಿಕೋದ್ಯಮ.

ಕೋವಿಡ್ ನಂತರದ ದಿನಗಳಲ್ಲಿ ಪತ್ರಿಕೋದ್ಯಮ ಕ್ಷೇತ್ರವು ಸಂಕಷ್ಟದಲ್ಲಿದೆ ಎಂದು ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ ಹೆಗ್ಗಳಗಿ ಹೇಳಿದರು.

ಸ್ಥಳಿಯ ಕೆಎಲ್‌ಇ ಸಂಸ್ಥೆಯ ಎಸ್.ಸಿ.ಪಿ. ಕಲಾ ಮತ್ತು ವಿಜ್ಞಾನ ಹಾಗೂ ಡಿ.ಡಿ. ಶಿರೋಳ ವಾಣಿಜ್ಯ ಪದವಿ ಕಾಲೇಜಿನ ಪತ್ರಿಕೋದ್ಯಮ ವಿಭಾಗ ಮತ್ತು ಕಾರ್ಯನಿರತ ಪತ್ರಕರ್ತರ ಸಂಘದ ಸ್ಥಳೀಯ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ 'ಡಿಜಿಟಲ್ ಯುಗದಲ್ಲಿ ಪತ್ರಿಕೋದ್ಯಮ' ಎಂಬ ಸಾಮಾಜಿಕ ಜವಾಬ್ದಾರಿ ವಿಷಯದ ಕುರಿತು ಉಪನ್ಯಾಸ ನೀಡಿದ ಅವರು,



ಪತ್ರಕರ್ತನು ಧೈರ್ಯವಂತ ಮತ್ತು ಗುಣವಂತನಾಗಿರಬೇಕು. ಕಾನೂನಿನ ಅರಿವಿರಬೇಕು. ದಾಖಲೆಯಿಲ್ಲದೆ ಯಾವುದನ್ನೂ ಬರೆಯಬಾರದು. ಟೀಕೆ ಮಾಡಲು ಸಿದ್ಧವಿರಬೇಕು. ಆದರೆ ಟೀಕೆಯಲ್ಲಿ ದ್ವೇಷವಿರಬಾರದು ಎಂದರು.

ಪತ್ರಕರ್ತ ನಾರನಗೌಡ ಉತ್ತಂಗಿ ಮಾತನಾಡಿ ಪತ್ರಕರ್ತನಿಗೆ ಅಪರಿಮಿತ ಸಾಮಾಜಿಕ ಕಳಕಳಿ ಮತ್ತು ದೇಶಾಭಿಮಾನ ಇರಬೇಕು. ಪತ್ರಿಕೋದ್ಯಮ ವಿದ್ಯಾರ್ಥಿಗಳು ದೇಶದ ಹಿತಕ್ಕಾಗಿ ದುಡಿಯುವ ಮನೋಭಾವ ಬೆಳೆಸಿಕೊಳ್ಳಬೇಕು.

ಸದಾ ದೇಶದ ಏಕತೆ ಜೊತೆ ಸಮೃದ್ಧ ರಾಷ್ಟ್ರ ನಿರ್ಮಾಣಕ್ಕೆ ಶ್ರಮಿಸುವ ಪ್ರಾಮಾಣಿಕತೆ ಇರಬೇಕು ಎಂದರು.

ಕಾಲೇಜಿನ ಪ್ರಾಂಶುಪಾಲ ಎನ್. ಬಿ. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಪತ್ರಕರ್ತರು ಸಮಾಜದ ಕನ್ನಡಿಯಾಗಿದ್ದು, ಸರ್ಕಾರದ ಲೋಪದೋಷಗಳನ್ನು ತಿದ್ದುವ ಮತ್ತು ಸಮಾಜದ ಸಮಸ್ಯೆಗಳನ್ನು ವರದಿ ಮೂಲಕ ಸರ್ಕಾರದ ಕಣ್ಣು ತೆರೆಸುವ ಗುರುತರ ಕೆಲಸ ಮಾಡುತ್ತಿರುವದು ಅತ್ಯಂತ ಶ್ಲಾಘನೀಯ ಎಂದರು.

ಕಾರ್ಯ ನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಹೇಶ ಮನ್ನಯ್ಯನವರಮಠ, ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಎಸ್. ಐ. ಮಠಪತಿ,

ಉಪನ್ಯಾಸಕ ಶಿವಲಿಂಗ ಸಿದ್ನಾಳ, ಪತ್ರಕರ್ತರಾದ ಎಸ್.ಎಸ್.ಈಶ್ವರಪ್ಪಗೋಳ, ಇಲಾಹಿ ಜಮಖಂಡಿ, ರಾಜು ನಾವಿ, ಹನುಮಂತ ನಾವಿ ಸೇರಿದಂತೆ ಇನ್ನೂ ಹಲವರು ಹಾಜರಿದ್ದರು.

ಶ್ರಾವಣಿ ಸೋರಗಾಂವಿ ಪ್ರಾರ್ಥಿಸಿದರು. ಸಾನಿಯಾ ಸನದಿ ಸ್ವಾಗತಿಸಿ ಸೊಗಸಾಗಿ ನಿರೂಪಿಸಿದರು.

ತೇರದಾಳ ಕ್ಷೇತ್ರದಲ್ಲಿ ಅಭಿವೃದ್ಧಿಗೆ ತೀವ್ರ ಹಿನ್ನಡೆ-ಭೀಮಶಿ ಮಗದುಮ್

ಕಮಿಷನ್ ಹಾವಳಿಯಿಂದ ಕಾಮಗಾರಿಗಳಿಗೆ ತಡೆ

ರಬಕವಿ-ಬನಹಟ್ಟಿ: ತೇರದಾಳ ವಿಧಾನಸಭಾ ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳ ವೇಗ ಕುಂಠಿತವಾಗಿದ್ದು, ಗುತ್ತಿಗೆದಾರರು ಕಾಮಗಾರಿ ಕೈಗೆತ್ತಿಕೊಳ್ಳಲು ಹಿಂದೇಟು ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಮಿಷನ್ ಹಾವಳಿ ಹಾಗೂ ಸರ್ಕಾರದಿಂದ ಅಭಿವೃದ್ಧಿ ಯೋಜನೆಗಳನ್ನು ತರುವಲ್ಲಿ ಸ್ಥಳೀಯ ಶಾಸಕರಾದ ಸಿದ್ದು ಸವದಿ ತೋರುತ್ತಿರುವ ನಿರ್ಲಕ್ಷ್ಯವೇ ಇದ- ಕ್ಕೆ ಕಾರಣವೆಂದು ಬಿಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಭೀಮಶಿ ಮಗದುಮ್ ಆರೋಪಿಸಿದರು.

ರಾಮಪುರದ ದಾನೇಶ್ವರಿ ಸಮುದಾಯ ಭವನದಲ್ಲಿ ಶನಿವಾರ ನಡೆದ ಕಾಂಗ್ರೆಸ್ ಸಭೆಯಲ್ಲಿ ಮಾತನಾಡಿದ ಅವರು, ಮದನಮಟ್ಟಿ ಸೇತುವೆ ಹಾಗೂ ಢವಳೇಶ್ವರ ಸೇತುವೆಗಳ ಹೆಚ್ಚುವರಿ ಕಾಮಗಾರಿಗಳಿಗೆ ಸರ್ಕಾರದಿಂದ ಹಣ ಬಿಡುಗಡೆ ಮಾಡಿಸುವಲ್ಲಿ ಕಾಂಗ್ರೆಸ್ಸಿನ ಮುಖಂಡ ಸಿದ್ದು ಕೊಣ್ಣೂರ ಅವರ ಪಾತ್ರ ಹಿರಿದಾಗಿದೆ ಎಂದು ಹೇಳಿದರು.

ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳು ನಿರೀಕ್ಷಿತ ವೇಗದಲ್ಲಿ ನಡೆಯುತ್ತಿಲ್ಲ. ಕಮಿಷನ್ ಹಾವಳಿಯಿಂದ ಗುತ್ತಿಗೆದಾರರು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು



ಹಿಂದೇಟು ಹಾಕುತ್ತಿರುವುದು ಒಂದೆಡೆ- ಯಾದರೆ, ಸರ್ಕಾರದ ವಿವಿಧ ಯೋಜನೆಗಳನ್ನು ಕ್ಷೇತ್ರಕ್ಕೆ ತರುವಲ್ಲಿ ಸ್ಥಳೀಯ ಶಾಸಕರ ನಿರ್ಲಕ್ಷ್ಯವೂ ಅಭಿವೃದ್ಧಿಗೆ ಹಿನ್ನಡೆಯಾಗಲು ಕಾರಣವಾಗಿದೆಯೆಂದು ಅವರು ಪರೋಕ್ಷವಾಗಿ ಶಾಸಕರ ಕಾರ್ಯ ವೈಖರಿಯನ್ನು ಟೀಕಿಸಿದರು.

ಚುನಾವಣೆಯಲ್ಲಿ ಸೋತರೂ ಜನಸೇವೆಯಲ್ಲಿ ಹಿಂದೆ ಸರಿಯದ ಕೊಣ್ಣೂರ: ಸಭೆಯಲ್ಲಿ ಮಾತನಾಡಿದ ಇಂಚಗೇರಿ ಸಂಪ್ರದಾಯದ ಪ್ರಭು ಬೆನ್ನಾಳೆ ಮಹಾರಾಜರು, ಚುನಾವಣೆಯಲ್ಲಿ ಪರಾಭವಗೊಂಡಿದ್ದರೂ ಸಿದ್ದು ಕೊಣ್ಣೂರ ಅವರು ಶಾಸಕರಷ್ಟೇ ಜನಪ್ರತಿನಿಧಿಯ ಜವಾಬ್ದಾರಿಯನ್ನು ನಿರ್ವಹಿಸುತ್ತಿರುವುದು ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಚುನಾವಣಾ ಫಲಿತಾಂಶವೇ ಜನಸೇವೆಯ ಅಂತಿಮ ಮಾನದಂಡವಲ್ಲ ಎಂಬುದನ್ನು ಕೊಣ್ಣೂರ ಅವರ ಕಾರ್ಯವೈಖರಿ ತೋರಿಸುತ್ತಿದೆಯೆಂದು ತಮ್ಮ ಆಶಯವನ್ನು ವ್ಯಕ್ತಪಡಿಸಿದ ಅವರು, ಜನರೊಂದಿಗೆ ಬೆರೆತು ಅವರ ಸಮಸ್ಯೆಗಳಿಗೆ ಸ್ಪಂದಿಸುವುದು ನಿಜವಾದ ಜನಪ್ರತಿನಿಧಿಯ ಗುಣವಾಗಿದೆ ಎಂದು ಅಭಿಪ್ರಾಯಪಟ್ಟರು.

ಅಭಿವೃದ್ಧಿಯೇ ರಾಜಕೀಯ ಚರ್ಚೆಯ ಕೇಂದ್ರ: ತೇರದಾಳ ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನ, ಸೇತುವೆಗಳಂತಹ ಮೂಲ ಸೌಕರ್ಯ ಯೋಜನೆಗಳಿಗೆ ಅನುದಾನ ತರುವುದು ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ವಿಚಾರಗಳು ಕಾಂಗ್ರೆಸ್ ಸಭೆಯಲ್ಲಿ ಪ್ರಮುಖವಾಗಿ ಪ್ರಸ್ತಾಪಗೊಂಡವು. ಮದನಮಟ್ಟಿ ಮತ್ತು ಢವಳೇಶ್ವರ ಸೇತುವೆಗಳ ಹೆಚ್ಚುವರಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಿಸುವಲ್ಲಿ ಕೊಣ್ಣೂರ ಅವರ ಪಾತ್ರವನ್ನು ಉಲ್ಲೇಖಿಸುವ ಮೂಲಕ, ಕ್ಷೇತ್ರದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ಇದೆ ಎಂಬ ಸಂದೇಶವನ್ನು ಕಾಂಗ್ರೆಸ್ ಮುಖಂಡರು ಮುಂದಿಟ್ಟರು.

ಸ್ಥಳೀಯ ಶಾಸಕರ ಕಾರ್ಯವೈಖರಿಯ ಕುರಿತು ಕೇಳಿ ಬಂದ ಟೀಕೆಗಳು ಹಾಗೂ ಪರಾಜಿತ ಅಭ್ಯರ್ಥಿ ಸಿದ್ದು ಕೊಣ್ಣೂರ ಅವರ ಜನಸೇವೆಗೆ ವ್ಯಕ್ತವಾದ ಮೆಚ್ಚುಗೆ ತೇರದಾಳ ಕ್ಷೇತ್ರದ ರಾಜಕೀಯ ವಲಯದಲ್ಲಿ ಚರ್ಚೆ ನಡೆದವು. ಹಳೇ ಹುಬ್ಬಳ್ಳಿ ವೀರಭಿಕ್ಷಾವೃತಿಮಠದ ಶಿವಶಂಕರಶ್ರೀ, ದಯಾನಂದ ಪಾಟೀಲ, ಬಸವರಾಜ ಕೊಕಟನೂರ, ಮಲ್ಲಪ್ಪ ಸಿಂಗಾಡಿ, ಲಕ್ಷ್ಮಣ ದೇಸಾರಟ್ಟಿ, ಸುರೇಶ ಪಾಟೀಲ, ನಸೀಮ್ ಮೊಕಾಶಿ, ಭರಮು ಉಳ್ಳಾಗಡ್ಡಿ, ರಾಜು ಬಗನಾಳ ಸೇರಿದಂತೆ ಇನ್ನೂ ಅನೇಕರು ಈ ಸಂದರ್ಭದಲ್ಲಿ ಪಾಲ್ಗೊಂಡಿದ್ದರು.

ಖಾನಾಪುರದಲ್ಲಿ ಅಕ್ರಮ ಭೂಮಿ ಹಂಚಿಕೆ ಆರೋಪ, ತನಿಖೆಗೆ ಆಗ್ರಹಿಸಿ ಪ್ರತಿಭಟನೆ



ಖಾನಾಪುರ: ಕೇರವಾಡ ಮತ್ತು ಸುರಾಪುರ ಗ್ರಾಮಗಳ ವ್ಯಾಪ್ತಿಯ 20 ಎಕರೆ 12 ಗುಂಟೆ ಸರ್ಕಾರಿ ಭೂಮಿಯನ್ನು ನಿಯಮಬಾಹಿರವಾಗಿ ಖಾಸಗಿ ವ್ಯಕ್ತಿ ಹೆಸರಿಗೆ ಹಸ್ತಾಂತರಿಸಲಾಗಿದೆ ಎಂದು ಆರೋಪಿಸಿರುವ ಉಭಯ ಗ್ರಾಮಗಳ ನಾಗರಿಕರು ಈ ಅಕ್ರಮದ ತನಿಖೆಯನ್ನು ಕೈಗೊಳ್ಳಬೇಕು ಮತ್ತು ಸರ್ಕಾರಿ ಜಮೀನನ್ನು ಮರಳಿ ಸರ್ಕಾರದ ವಶಕ್ಕೆ ಪಡೆಯಬೇಕು ಎಂದು ಆಗ್ರಹಿಸಿ ಗುರುವಾರ ಪಟ್ಟಣದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿ ತಹಶೀಲ್ದಾರ್ ಕಚೇರಿಗೆ ಮುತ್ತಿಗೆ ಹಾಕಿದರು.

ಪಟ್ಟಣದ ಬಸವೇಶ್ವರ ವೃತ್ತದಿಂದ ತಹಶೀಲ್ದಾರ್ ಕಚೇರಿಯವರೆಗೆ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ಪದಾಧಿಕಾರಿಗಳು, ಕಾರ್ಯಕರ್ತರು, ಸುರಾಪುರ ಮತ್ತು ಕೇರವಾಡ ಗ್ರಾಮಗಳ ನಾಗರಿಕರು ಭಾಗವಹಿಸಿದ್ದರು. ಧರಣಿ ಸುದ್ದಿ ತಿಳಿದು ಸ್ಥಳಕ್ಕಾಗಮಿಸಿದ ಮಾಜಿ ಶಾಸಕ ಅರವಿಂದ ಪಾಟೀಲ ಪ್ರತಿಭಟನಾಕಾರರ ಸಮಸ್ಯೆ ಆಲಿಸಿದರು.

ಬಳಿಕ ಅವರು ಈ ಮಾಹಿತಿಯನ್ನು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರಿಗೆ ಕರೆ ಮಾಡಿ ತಿಳಿಸಿದರು. ಅಹವಾಲು ಆಲಿಸಿದ ಜಿಲ್ಲಾಧಿಕಾರಿ, ಈ ಸಮಸ್ಯೆಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಕ್ರಮ ಜರುಗಿಸಲು ವಾರದ ಗಡುವು ನೀಡುವಂತೆ ಕೋರಿದ ಹಿನ್ನೆಲೆಯಲ್ಲಿ ತಹಶೀಲ್ದಾರ್‌ಗೆ ಮತ್ತೊಂದು ಮನವಿ ಸಲ್ಲಿಸಿ ಪ್ರತಿಭಟನೆ ಹಿಂಪಡೆದರು.

ಹಿಡಕಲ್ ಅಡವಿಸಿದ್ಧೇಶ್ವರ ಮಠದ ಸ್ವಾಮೀಜಿ, ಕರವೇ ಅಧ್ಯಕ್ಷ ವಿಠ್ಠಲ ಹಿಂಡಲಕರ, ಮುಖಂಡ ಮಂಜುನಾಥ ಅಂಕಲಗಿ, ಕರವೇ ಕಾರ್ಯಕರ್ತರು, ಕೇರವಾಡ, ಸುರಾಪುರ, ಮೂಕಬಸವ ನಗರದ ನಾಗರಿಕರು ಇದ್ದರು.

ಬೆಳಗಾವಿ ಗ್ರಾಮೀಣ ಠಾಣೆ ಪೊಲೀಸರಿಂದ 26.53 ಲಕ್ಷ ಮೌಲ್ಯದ ವಸ್ತು ವಶ

ಬೆಳಗಾವಿ: ತಾಲ್ಲೂಕಿನ ಪೀರನವಾಡಿ, ಹುಂಚ್ಯಾನಟ್ಟಿ, ಮಚ್ಛೆ ಗ್ರಾಮಗಳಲ್ಲಿ ಮನೆ ಕಳ್ಳತನ ಮಾಡಿದ್ದ ಆರೋಪಿಯನ್ನು ಬೆಳಗಾವಿ ಗ್ರಾಮೀಣ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಟಿಳಕವಾಡಿಯ ರೋಹನ ರೂಪೇಶ ಪಾಟೀಲ ಬಂಧಿತ. 161 ಗ್ರಾಂ ಚಿನ್ನಾಭರಣ,1 ಕೆ.ಜಿ ಬೆಳ್ಳಿ, ದ್ವಿಚಕ್ರ ವಾಹನ ಸೇರಿ ?26.53 ಲಕ್ಷ ಮೌಲ್ಯದ ವಸ್ತು ವಶಕ್ಕೆ ಪಡೆಯಲಾಗಿದೆ.

ಹುಂಚ್ಯಾನಟ್ಟಿಯ ಸ್ವಾಮಿ ವಿವೇಕಾ ನಂದ ನಗರದ ಲಕ್ಷ್ಮೀ ಸಿದ್ರಾಮ ರಾಮಣ್ಣ ವರ ಅವರು, ಅ.2ರಂದು ದೂರು ದಾಖಲಿಸಿದ್ದರು.

ಪೊಲೀಸರು ಆತನನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಬೇರೆ ಕಡೆಯೂ ಕಳ್ಳತನ ಮಾಡಿದ್ದಾಗಿ ಒಪ್ಪಿಕೊಂಡಿದ್ದಾನೆ. ಇನ್‌ಸ್ಪೆಕ್ಟರ್ ನಾಗನಗೌಡ ಕಟ್ಟಿಮನಿಗೌಡ್ರ ನೇತೃತ್ವದ ತಂಡ ಕಾರ್ಯಾಚರಣೆ ಮಾಡಿದೆ.


ಹಂದಿಗುಂದ: ಸಾಲ ತೀರಿಸಲಾಗದೆ ವ್ಯಕ್ತಿಯೊಬ್ಬರು ಗ್ರಾಮದ ಮನೆಯಲ್ಲಿ ನೇಣು ಬಿಗಿದುಕೊಂಡು ಗುರುವಾರ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಕೇದಾರಿ ಸಂಕ್ರಟ್ಟಿ(34) ಮೃತರು. ಬನಹಟ್ಟಿಯ ಬ್ಯಾಂಕ್‌ನಲ್ಲಿ ?2 ಲಕ್ಷ ಹೈನುಗಾರಿಕೆ ಸಾಲ, ?3 ಲಕ್ಷ ಕೈಗಡ ಸಾಲ ಪಡೆದಿದ್ದರು. ಅದನ್ನು ತೀರಿಸ ಲಾಗದೆ ಮನನೊಂದಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಹಾರೂಗೇರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬನಹಟ್ಟಿಯಲ್ಲಿ ಕಾಂಗ್ರೆಸ್ ಕಾರ್ಯಾಲಯದ ಉದ್ಘಾಟನೆ

ಬನಹಟ್ಟಿ : ಇಲ್ಲಿಯ ಬಸ್ ನಿಲ್ದಾಣದ ಬಳಿ ನೂತನವಾಗಿ ನಿರ್ಮಿಸಲಾದ ತೇರದಾಳ ಕ್ಷೇತ್ರದ ಕಾಂಗ್ರೆಸ್ ಕಾರ್ಯಾಲಯವನ್ನು ಕಾಂಗ್ರೆಸ್ ಜಿಲ್ಲಾಧ್ಯಕ್ಷ ದಯಾನಂದ ಪಾಟೀಲ ಉದ್ಘಾಟಿಸಿದರು.

ಶನಿವಾರ ಸಂಜೆ ಕಾರ್ಯಾಲಯ ಉದ್ಘಾಟಿಸಿ ಮಾತನಾಡಿದ ದಯಾನಂದ ಪಾಟೀಲ, ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವುದು ಕಾರ್ಯಕರ್ತರ ಪ್ರಮುಖ ಜವಾಬ್ದಾರಿಯಾಗಿದೆ. ಕಾರ್ಯಾಲಯವು ಪಕ್ಷದ ಎಲ್ಲ ಕಾರ್ಯಕರ್ತರಿಗೆ ಮುಕ್ತವಾಗಿದ್ದು, ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ಪರಿಹರಿಸಲು ಹಾಗೂ ಪಕ್ಷದ ಚಟುವಟಿಕೆಗಳನ್ನು ಸಮನ್ವಯಗೊಳಿಸಲು ಸಹಕಾರಿಯಾಗಲಿದೆಯೆಎಂದು ಹೇಳಿದರು.



ಕ್ಷೇತ್ರದ ಮುಖಂಡ ಸಿದ್ದು ಕೊಣ್ಣೂರ ಮಾತನಾಡಿ, ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಪಕ್ಷದ ಕಾರ್ಯಕರ್ತರು ಈಗಿನಿಂದಲೇ ಸಂಘಟನೆಯಲ್ಲಿ ತೊಡಗಿಸಿಕೊಳ್ಳಬೇಕು. ಗ್ರಾಮ, ವಾರ್ಡ್ ಹಾಗೂ ಬೂತ್ ಮಟ್ಟದಲ್ಲಿ ಪಕ್ಷವನ್ನು ಬಲಪಡಿಸಿ, ಕಾಂಗ್ರೆಸ್ಸಿನ ಜನಪರ ಕಾರ್ಯಕ್ರಮಗಳು ಮತ್ತು ಸಿದ್ಧಾಂತಗಳನ್ನು ಜನರಿಗೆ ತಲುಪಿಸಬೇಕೆಂದರು.

ನಗರ ಘಟಕದ ಅಧ್ಯಕ್ಷ ಶೇಖರ ಹಕ್ಕಲದಡ್ಡಿ ಮಾತನಾಡಿ, ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡುವ ಮೂಲಕ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಬೇಕು ಎಂದು ತಿಳಿಸಿದರು.

ಕಾರ್ಯಕರ್ತರ ಕುಂದು ಕೊರತೆಗಳನ್ನು ಆಲಿಸಿ, ಅವುಗಳಿಗೆ ಸೂಕ್ತ ಪರಿಹಾರ ಒದಗಿಸಲು ಕಾರ್ಯಾಲಯ ಪ್ರಮುಖ

ವೇದಿಕೆ ಆಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಬ್ಲಾಕ್ ಕಾಂಗ್ರೆಸ್ ಪದಾಧಿಕಾರಿಗಳು, ವಿವಿಧ ಘಟಕಗಳ ಅಧ್ಯಕ್ಷರು, ಸ್ಥಳೀಯ ಮುಖಂಡರು, ಜನಪ್ರತಿನಿಧಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಪಿಯು ಕಟ್ಟಡಕ್ಕೆ ಭೂಮಿ ಪೂಜೆ

ತೇರದಾಳ : ರಾಜ್ಯದಲ್ಲಿ ಶೈಕ್ಷಣಿಕ ಕ್ಷೇತ್ರವು ಪ್ರಗತಿ ಹೊಂದುವ ಮೂಲಕ ಎಲ್ಲ ಸಮಾಜದವರಿಗೆ ಉನ್ನತ ಹಾಗೂ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಸರಕಾರವು ನೀಡುತ್ತಿರುವ ಕೊಡುಗೆ ಅನನ್ಯವಾಗಿದೆ ಎಂದು ಶಾಸಕ ಸಿದ್ದು ಸವದಿ ಹೇಳಿದರು.

ಹನಗಂಡಿ ಗ್ರಾಮದ ಸರ್ವೆ ನಂಬರಿನಲ್ಲಿರುವ ತೇರದಾಳ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಪಿಯು ಕಟ್ಟಡಕ್ಕೆ ಇಲಾಖೆ ನೀಡಿದ ಎರಡು ಕೋಟಿ ರೂ. ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗೆ ಶಂಕು ಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ವಸತಿ ಶಾಲೆಯ ಮಕ್ಕಳು ತಂದೆ-ತಾಯಿಯನ್ನು ಬಿಟ್ಟು ದೂರದ ವಸತಿ ಶಾಲೆಗೆ ಬಂದಿರುತ್ತಾರೆ. ಮಕ್ಕಳಿಗೆ ಎಲ್ಲ ಸೌಲಭ್ಯಗಳನ್ನು ನೀಡುವ ಕೆಲಸ ಸರಕಾರಗಳು ಮಾಡಬೇಕು.

ವಸತಿ ನಿಲಯದ ಶಿಕ್ಷಕರು ಹಾಗೂ ಸಿಬ್ಬಂದಿಗಳು ಮಕ್ಕಳನ್ನು ಕಾಳಜಿಯಿಂದ ಪಾಲನೆ ಪೋಷಣೆ ಮಾಡಬೇಕೆಂದು ಸಲಹೆ ನೀಡಿದ ಶಾಸಕ ಸಿದ್ದು ಸವದಿ, ವಸತಿ ಶಾಲೆಗೆ ಬೇಕಾಗುವ ಅಗತ್ಯ ಸೌಲಭ್ಯಗಳ ಕುರಿತು ಇಲಾಖೆ ಸಚಿವರ ಗಮನಕ್ಕೆ ತಂದು ಅವುಗಳನ್ನು ಈಡೇರಿಸುವ ಭರವಸೆ ನೀಡಿದರು. ಪ್ರಾಚಾರ್ಯ ಎಂ. ಆರ್. ನದಾಫ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಶೋಕ ಮುರಗುಂಡಿ, ತಮ್ಮಣ್ಣ ಕಮಲದಿನ್ನಿ, ಬಸನಗೌಡ ಪಾಟೀಲ, ಅಲ್ಲಪ್ಪ ಆರೆನಾಡ, ಶಂಕರ ಹುದ್ದಾರ, ಧರೇಶ ಹುದ್ದಾರ, ಸಚಿನ ಮುರಗುಂಡಿ, ಬಾಳೇಶ ಪಾಟೀಲ, ಕೃಷ್ಣಾ ಲಾಳಕಿ, ಅನಿಲ ಗುಬಚಿ, ಮಲ್ಲಪ್ಪ ಸಿಂಧೂರ, ಶ್ರೀಶೈಲ ಪಾಟೀಲ ಹಾಗೂ ಇನ್ನಿತರರು ಭಾಗವಹಿಸಿದ್ದರು.

ವಿಜ್ಞಾನ ಪರಿಷತ್ ಜಿಲ್ಲಾಧ್ಯಕ್ಷರಾಗಿ ಜಗದೀಶ ಮೇತ್ರಿ ನೇಮಕ

ರಬಕವಿ-ಬನಹಟ್ಟಿ : ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಬಾಗಲಕೋಟ ಜಿಲ್ಲಾಧ್ಯಕ್ಷರಾಗಿ ಬನಹಟ್ಟಿ ಪಶ್ಚಿಮ ವಲಯದ ಸಿ.ಆರ್.ಪಿ. ಜಗದೀಶ ಮೇತ್ರಿಯವರನ್ನು ರಾಜ್ಯಾಧ್ಯಕ್ಷ ಹುಲಿಕಲ್ ನಟರಾಜ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಜಿಲ್ಲೆಯಲ್ಲಿ ಮಕ್ಕಳಲ್ಲಿ, ಯುವಕರಲ್ಲಿ, ಮಹಿಳೆಯರಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವುದು, ವೈಜ್ಞಾನಿಕ ಚಿಂತನೆ ಮೂಡಿಸುವುದು ಸೇರಿದಂತೆ ಅನೇಕ ವೈಜ್ಞಾನಿಕ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಸಂಘಟಿಸುವ ಹೊಣೆಯನ್ನು ವಹಿಸಲು ತಿಳಿಸಿದ್ದಾರೆ.

Printed by Published by ASHWARYA PALLATE on behalf of ASHWARYA PALLATE, Printed at DHARIDEEPA PRINTERS & PUBLISHERS, NO. 74, 4TH MAIN, 7TH CROSS NEAR CHOWDESHWARI TEMPLE, KAVERINAGAR, MAHADEVAPURA, BENGALURU, KARNATAKA - 560048. and Published at BASAVESHWAR CIRCLE, 4TH CROSS, NEKAR NAGAR, HUBLI, OLD HUBLI, DHARWAD, KARNATAKA - 580024. Editor ASHWARYA PALLATE